☞ ಹಾವೇರಿ
☞ ಗದಗ
☞ ಧಾರವಾಡ
☞ ದಾವಣಗೆರೆ
☞ ಚಿತ್ರದುರ್ಗ
☞ ವಿಜಯನಗರ
☞ ಶಿವಮೊಗ್ಗ
☞ ಬಳ್ಳಾರಿ

ಸುದ್ದಿ, ಫೋಟೋ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ : 9480410207

ಪಾಂಡವ

PANDAVA Regional Kannada News Paper ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಪತ್ರಿಕೆ, ಜಾಹೀರಾತು ಇಸ್ತಿಯಾರನಾಮೆಗಳಿಗಾಗಿ ಸಂಪರ್ಕಿಸಿ : ಮೊಬೈಲ್ ನಂ. : 9742789207 7411679202

* Volume : XVII * Issue : 071 * SATURDAY 07, NOVEMBER 2026 * Editor : S.T. VEDAMURTHY * Page : 6 * Rs : 2.50 * RNI No. KARKAN/2011/39005 * PMG/KA/NK/HVR-028/2026-28 * pandavarnr@gmail.com * Mob No.: 9742789207

ಪ್ರಮುಖ ಸಂಕ್ಷಿಪ್ತ ಸುದ್ದಿ

ಬಾಡಿಗೆ ಮನೆಯಲ್ಲಿ ವೃದ್ಧೆ ಸಾವು

ಪಾಂಡವ ನ್ಯೂಸ್, ರಾಣೆಬೆನ್ನೂರು : ನಗರದ ಗಂಗಾಪುರ ರಸ್ತೆಯ ಗೊಲ್ಲಸಂಗಿಯವರ ಓಣಿಯ ಬಾಡಿಗೆ ಮನೆಯಲ್ಲಿ 65 ವರ್ಷದ ಸುವರ್ಣಮ್ಮ ಬನ್ನಿಕೊಡ ಮೃತಪಟ್ಟಿದ್ದಾರೆ.

ಅನಾರೋಗ್ಯದಿಂದ ಬಳಲುತ್ತಿದ್ದ ಸುವರ್ಣಮ್ಮ ಅವರನ್ನು ನ.5ರಂದು ಬೆಳಿಗ್ಗೆ ಸಂಬಂಧಿಕರು ರಾಣೆಬೆನ್ನೂರು ತಾಲೂಕು ಆಸ್ಪತ್ರೆಗೆ ಕರೆದೊಯ್ದಾಗ ವೈದ್ಯರು ಮೃತಪಟ್ಟಿರುವುದಾಗಿ ತಿಳಿಸಿದ್ದಾರೆ. ಅನಾರೋಗ್ಯದಿಂದಲೇ ಸಾವು ಸಂಭವಿಸಿರುವ ಶಂಕೆ ವ್ಯಕ್ತಪಡಿಸಿರುವ ಕುಟುಂಬದವರು, ಯಾವುದೇ ಅನುಮಾನವಿಲ್ಲ ಎಂದು ಪೊಲೀಸರಿಗೆ ತಿಳಿಸಿದ್ದಾರೆ. ಈ ಕುರಿತು ರಾಣೆಬೆನ್ನೂರು ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನಿಲ್ಲಿಸಿದ್ದ ಬೈಕ್‌ಗೆ ಮತ್ತೊಂದು ಬೈಕ್ ಡಿಕ್ಕಿ: ಇಬ್ಬರಿಗೆ ಗಾಯ

ಪಾಂಡವ ನ್ಯೂಸ್, ಹಾವೇರಿ : ರಸ್ತೆ ಮಧ್ಯೆ ನಿಲ್ಲಿಸಿದ್ದ ಬುಲೆಟ್ ಬೈಕ್‌ಗೆ ಮತ್ತೊಂದು ಬೈಕ್ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಗಾಯಗೊಂಡ ಘಟನೆ ಹಾವೇರಿ-ಕನಕಾಪುರ ರಸ್ತೆಯ ಬಿಜೆಪಿ ಕಚೇರಿ ಸಮೀಪ ಅ.23ರಂದು ಮಧ್ಯಾಹ್ನ ನಡೆದಿದೆ.ಹಿರೇಕೆರೂರು ತಾಲೂಕಿನ ಚನ್ನಳ್ಳಿ ತಾಂಡಾದ ಗಣೇಶ (43) ಎಂಬುವರು ಕೆಎ-68/ಎಸ್-0936 ನೋಂದಣಿ ಸಂಖ್ಯೆಯ ಬುಲೆಟ್ ಬೈಕ್‌ನಲ್ಲಿ ಕನಕಾಪುರ ಕಡೆಯಿಂದ ಹಾವೇರಿ ನಗರದ ಕಡೆಗೆ ಬರುತ್ತಿದ್ದರು. ಈ ವೇಳೆ ಬಿಜೆಪಿ ಕಚೇರಿ ಸಮೀಪ ಯಾವುದೇ ಸಿಗ್ನಲ್ ನೀಡದೆ ಏಕಾಏಕಿ ರಸ್ತೆ ಮಧ್ಯೆ ಬೈಕ್ ನಿಲ್ಲಿಸಿದ್ದಾರೆ.ಅದೇ ಮಾರ್ಗದಲ್ಲಿ ಹಾವೇರಿ ನಗರದ ಕಡೆಗೆ ರುತ್ತಿದ್ದ ಕೆಎ-27/ಎಸ್-0359 ನೋಂದಣಿ ಸಂಖ್ಯೆಯ ಮತ್ತೊಂದು ಬೈಕ್ ನಿಲ್ಲಿಸಿದ್ದ ಬುಲೆಟ್‌ಗೆ ಡಿಕ್ಕಿ ಹೊಡೆದಿದೆ. ಪರಿಣಾಮ ಮತ್ತೊಂದು ಬೈಕ್‌ನಲ್ಲಿದ್ದ ಇಬ್ಬರಿಗೆ ಬಲಗೈ, ಎಡಗಾಲಿನ ಮೊಣಕಾಲು ಹಾಗೂ ಮುಖದ ಭಾಗದಲ್ಲಿ ಗಾಯಗಳಾಗಿವೆ.ಈ ಕುರಿತು ಹಾವೇರಿ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಆಟೊ ಡಿಕ್ಕಿ: ಬೈಕ್ ಸವಾರನಿಗೆ ಗಾಯ

ಪಾಂಡವ ನ್ಯೂಸ್, ಹಾನಗಲ್ : ತಿಲವಳ್ಳಿ-ಸಂಗೂರು ರಸ್ತೆಯಲ್ಲಿ ಆಟೊ ಡಿಕ್ಕಿಯಾಗಿ ಬೈಕ್ ಸವಾರ ಗಿರೀಶ್ (36) ಗಾಯಗೊಂಡಿದ್ದಾರೆ.

ನ.3ರಂದು ಬೆಳಿಗ್ಗೆ 11.20ರ ಸುಮಾರಿಗೆ ಜೈ ಸಂತೋಷಿ ಸೀಮಾ ವೈನ್‌ಶಾಪ್ ಬಳಿ ಗಿರೀಶ್ ಬೈಕ್‌ನಲ್ಲಿ ತೆರಳುತ್ತಿದ್ದಾಗ, ಶಬ್ಬೀರ್ ಅಹ್ಮದ್ ಎಂಬುವವರು ಚಲಾಯಿಸುತ್ತಿದ್ದ ಕೆಎ-68, 3814 ಸಂಖ್ಯೆಯ ಆಟೊ ಅತಿವೇಗ ಹಾಗೂ ಅಜಾಗರೂಕತೆಯಿಂದ ಬಂದು ಬೈಕ್‌ಗೆ ಡಿಕ್ಕಿ ಹೊಡೆದಿದೆ.

ಡಿಕ್ಕಿಯ ರಭಸಕ್ಕೆ ರಸ್ತೆಗೆ ಬಿದ್ದ ಗಿರೀಶ್ ಅವರ ಬಲಗಾಲಿನ ಮೂಳೆ ಮುರಿದಿದ್ದು, ಬಲಗೈ ಸೇರಿದಂತೆ ದೇಹದ ಇತರ ಭಾಗಗಳಿಗೂ ಗಾಯಗಳಾಗಿವೆ. ಈ ಕುರಿತು ಆಡೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಎರಡು ಬಕ್ ನಡುವೆ ಡಿಕ್ಕಿ: ಬೈಕ್ ಸವಾರನಿಗೆ ಗಾಯ

ಪಾಂಡವ ನ್ಯೂಸ್, ಹಾವೇರಿ: ನಗರದ ವಾಲ್ಮೀಕಿ ಭವನ ರಸ್ತೆ ಕ್ರಾಸ್ ಬಳಿ ಎರಡು ವಾಹನಗಳ ನಡುವೆ ಡಿಕ್ಕಿಯಾಗಿ ಬೈಕ್ ಸವಾರ ಗಾಯಗೊಂಡ ಘಟನೆ ನ.2ರಂದು ನಡೆದಿದೆ. ಸಿದ್ದಾಪುರದ ಸೋಮಣ್ಣ ಬಸಪ್ಪಪ್ಪ ಶಿರಹಟ್ಟಿ (72) ಹಾಗೂ ಹಾನಗಲ್ ತಾಲೂಕಿನ ಕಸ್ತೂರಬಾನಗರದ ಮೊಹಮ್ಮದ್ ಜಾಫರ್ ಅವರು ಚಲಾಯಿಸುತ್ತಿದ್ದ ವಾಹನಗಳ ನಡುವೆ ಅಪಘಾತ ಸಂಭವಿಸಿದೆ. ಇಬ್ಬರೂ ಅಜಾಗರೂಕತೆಯಿಂದ ವಾಹನ ಚಲಾಯಿಸಿದ್ದರಿಂದ ವಾಲ್ಮೀಕಿ ಭವನ ಕ್ರಾಸ್ ಸಮೀಪ ಡಿಕ್ಕಿಯಾಗಿದೆ. ಘಟನೆಯಲ್ಲಿ ಬೈಕ್ ಸವಾರನ ಎಡಗಾಲು ಹಾಗೂ ಎಡಗೈಗೆ ಗಾಯಗಳಾಗಿವೆ ಎಂದು ದೂರಿನಲ್ಲಿ ತಿಳಿಸಲಾಗಿದೆ. ಈ ಕುರಿತು ಹಾವೇರಿ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ವಾಯು ಮಾಲಿನ್ಯ ನಿಯಂತ್ರಣ ಜಾಗೃತಿ ಮಾಸಾಚರಣೆ

ವಾಯು ಮಾಲಿನ್ಯ ನಿಯಂತ್ರಣಕ್ಕೆ ಎಲ್ಲರೂ ಕೈಜೋಡಿಸಬೇಕು

ಪಾಂಡವ ನ್ಯೂಸ್, ಹಾವೇರಿ : ವಾಯು ಮಾಲಿನ್ಯದಿಂದ ಹಲವಾರು ರೋಗಗಳು ಉಂಟಾಗುತ್ತಿವೆ. ಇತ್ತೀಚೆಗೆ ಕ್ಯಾನ್ಸರ ಆಸ್ಪತ್ರೆಗಳ ಸಂಖ್ಯೆಯಲ್ಲಿ ಹೆಚ್ಚಳವಾಗುತ್ತಿವೆ. ವಾಹನಗಳ ಇಂಜಿನ್ ನಿರ್ವಹಣೆ ಮಾಡದೇ ಇರುವ ಕಾರಣದಿಂದ, ಎಕ್ಸಲರೇಟರನ್ನು ಅನಗತ್ಯವಾಗಿ ಬಳಸುವುದರಿಂದ ವಾಯುಮಾಲಿನ್ಯ ಉಂಟಾಗುತ್ತದೆ. ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದ್ದು, ವಾಯು ಮಾಲಿನ್ಯ ನಿಯಂತ್ರಣದ ಅಭಿಯಾನಕ್ಕೆ ಎಲ್ಲರೂ ಕೈ ಜೋಡಿಸಬೇಕು ಎಂದು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ವಿಭಾಗೀಯ ನಿಯಂತ್ರಣಾಧಿಕಾರಿ ವಿಜಯಕುಮಾರ ಜಿ. ಅವರು ಕರೆ ನೀಡಿದರು.

ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯಲ್ಲಿ ಶುಕ್ರವಾರ ವಾಯುಮಾಲಿನ್ಯ ನಿಯಂತ್ರಣ ಜಾಗೃತಿ ಮಾಸಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಒಮ್ಮೆ ಹಾಳಾದರೆ ಮತ್ತೆಂದೂ ಸರಿಪಡಿಸಲಾಗದ ಆ ಒಂದು ಮಾಲಿನ್ಯವೆಂದರೆ ಅದು "ವಾಯು ಮಾಲಿನ್ಯ". ವಾಯುವಿನೊಂದಿಗೆ, ಮನುಷ್ಯರಿಗೆ, ಜೀವಿಗಳಿಗೆ ಹಾಗೂ ಪರಿಸರಕ್ಕೆ ಹಾನಿಯನ್ನುಂಟುಮಾಡುವ ರಾಸಾಯನಿಕಗಳು, ಸೂಕ್ಷ್ಮ ಕಣಗಳು ಅಥವಾ ಜೈವಿಕ ಸಾಮಗ್ರಿಗಳು ವಾತಾವರಣಕ್ಕೆ ಸೇರಿಕೊಳ್ಳುವ ಪ್ರಕ್ರಿಯೆ ವಾಯು ಮಾಲಿನ್ಯ ಎಂದು ಹೇಳಿದರು.



ಮಾಲಿನ್ಯಗಳಲ್ಲಿ ಹಲವು ವಿಧಗಳನ್ನು ನಾವು ಕಾಣುತ್ತೇವೆ. ಅವುಗಳನ್ನು ಬಹಳ ಸರಳವಾಗಿ ವಿಂಗಡಿಸುವುದಾದರೆ, ಜಲ ಮಾಲಿನ್ಯ, ಮಣ್ಣು ಮಾಲಿನ್ಯ, ಶಬ್ದ ಮಾಲಿನ್ಯ ಹಾಗೂ ವಾಯು ಮಾಲಿನ್ಯ.

ಈ ಎಲ್ಲಾ ಮಾಲಿನ್ಯಗಳಿಗೂ ಅದರದ್ದೇ ಪ್ರಮುಖ ಕಾರಣಗಳಿವೆ. ಆ ಎಲ್ಲಾ ಮಾಲಿನ್ಯಗಳನ್ನು ನಿಯಂತ್ರಣಕ್ಕೆ ತರಲೆಂದು ಹಲವಾರು ರೀತಿಯ ಪ್ರಯತ್ನಗಳು ನಡೆಯುತ್ತಿವೆ ಎಂದರು.

ಪ್ರಾದೇಶಿಕ ಸಾರಿಗೆ ಅಧಿಕಾರಿ ಕು.ವಿನಯ ಕಾಟೋಕರ್ ಆರ್. ಮಾತನಾಡಿ, ವಾಯು ಇಂದು ಅತೀ ಹೆಚ್ಚಿನ ಮಾಲಿನ್ಯಕ್ಕೆ ಒಳಗಾಗಿದೆ. ಮಾಲಿನ್ಯ ಕಾರಕ ಅನಿಲಗಳನ್ನು ಬಿಡುಗಡೆ ಮಾಡುವ ವಿದ್ಯುತ್ ಉತ್ಪಾದನಾ ಘಟಕಗಳು, ಅತೀ ಹೆಚ್ಚು ಹೊಗೆ ಉಗುಳುವ ಕಾರ್ಖಾನೆಗಳಿಂದಲೂ ವಾಯು ಮಾಲಿನ್ಯ ಉಂಟಾಗುತ್ತದೆ. ವಾಹನಗಳಿಂದ ಹೊರಸೂಸುವ ಹಾನಿಕಾರಕ ಹೊಗೆಯಿಂದ ಮಾನವನ ಆರೋಗ್ಯ ಮತ್ತು ಪರಿಸರ ಎರಡರ ಮೇಲೂ ಅಗಾಧವಾದ ಪರಿಣಾಮ ಉಂಟಾಗುತ್ತಿದೆ. ಜೀವಸಂಕುಲದ ಒಳಿತಿಗಾಗಿ ಹಾಗೂ ಉಳಿವಿಗಾಗಿ ಇಂದೇ ನಾವೆಲ್ಲರೂ ಪಣತೊಟ್ಟರೆ, ವಾಯುಮಾಲಿನ್ಯವನ್ನು ತಡೆಯಬಹುದಾಗಿದೆ.

ಹೆಚ್ಚು ಹೆಚ್ಚಾಗಿ ಗಿಡಗಳನ್ನು ನೆಟ್ಟು ಪೋಷಿಸುವುದರ ಮೂಲಕ ವಾಯುಮಾಲಿನ್ಯವನ್ನು ತಡೆಯಬಹುದಾಗಿದೆ ಎಂದು ಹೇಳಿದರು. ಮೋಟಾರು ವಾಹನ ನಿರೀಕ್ಷಕರಾದ ಶ್ರೀಮತಿ ಲೀಲಾ ಆರ್. ಅವರು ವಾಯು ಮಾಲಿನ್ಯ ನಿಯಂತ್ರಣ ಕುರಿತಾದ ಪ್ರತಿಜ್ಞಾವಿಧಿ ಬೋಧಿಸಿ ಮಾತನಾಡಿ, ವಾಹನಗಳನ್ನು ಸರಿಯಾಗಿ ನಿರ್ವಹಣೆ ಮಾಡಿದಲ್ಲಿ ವಾಯುಮಾಲಿನ್ಯವನ್ನು ತಡೆಯಬಹುದಾಗಿದೆ.

ಕಲಬೆರಕೆ ಇಂಧನ ಬಳಸದೇ ಪರಿಶುದ್ಧ ಇಂಧನ ಬಳಸುವುದು, ಪ್ರತಿಯೊಬ್ಬ ವಾಹನ ಮಾಲೀಕರು ಕಾಲಕಾಲಕ್ಕೆ ವಾಹನಗಳನ್ನು ನಿರ್ವಹಣೆ ಮಾಡಿ ವಾಯುಮಾಲಿನ್ಯ ಹತೋಟಿ ಪ್ರಮಾಣ ಪತ್ರವನ್ನು ಪಡೆದುಕೊಳ್ಳಬೇಕು.

2ನೇ ಪುಟಕ್ಕೆ ▶▶▶

ಹರಳಹಳ್ಳಿ ಬಳಿ ಅಕ್ರಮ ಮರಳುಗಾರಿಕೆ : ಅಧಿಕಾರಿಗಳ ಧಿಡೀರ ದಾಳಿ

ಪಾಂಡವ ನ್ಯೂಸ್, ಗುತ್ತಲ : ಸಮೀಪದ ಹರಳಹಳ್ಳಿ ಗ್ರಾಮದ ತುಂಗಭದ್ರಾ ನದಿ ಪಾತ್ರದಲ್ಲಿ ನಡೆಯುತ್ತಿದ್ದ ಅಕ್ರಮ ಮರಳುಗಾರಿಕೆ ವಿರುದ್ಧ ಕಂದಾಯ, ಗಣಿ ಮತ್ತು ಭೂವಿಜ್ಞಾನ ಹಾಗೂ ಪೊಲೀಸ್ ಇಲಾಖೆ ಅಧಿಕಾರಿಗಳು ಜಂಟಿ ಕಾರ್ಯಾಚರಣೆ ನಡೆಸಿ, ಅಂದಾಜು 1.20 ಲಕ್ಷ ರೂ. ಮೌಲ್ಯದ 150 ಮೆಟ್ರಿಕ್ ಟನ್ ಮರಳನ್ನು ವಶಪಡಿಸಿಕೊಂಡಿದ್ದಾರೆ.ತುಂಗಭದ್ರಾ ನದಿ ಪಾತ್ರದಲ್ಲಿ ಸರ್ಕಾರದ ನಿಯಮಗಳನ್ನು ಉಲ್ಲಂಘಿಸಿ ಅಕ್ರಮವಾಗಿ ಮರಳು ಸಂಗ್ರಹಿಸಲಾಗುತ್ತಿದೆ ಎಂಬ ಮಾಹಿತಿ ಹಿನ್ನೆಲೆಯಲ್ಲಿ ತಹಶೀಲ್ದಾರ್ ಶರಣಮ್ಮ ಕೆ. ನೇತೃತ್ವದಲ್ಲಿ ಅಧಿಕಾರಿಗಳ ತಂಡ ದಿಢೀರ್ ದಾಳಿ ನಡೆಸಿತು.



ಈ ವೇಳೆ ಅಕ್ರಮವಾಗಿ ಸಂಗ್ರಹಿಸಿಟ್ಟಿದ್ದ ಮರಳನ್ನು ಪತ್ತೆಹಚ್ಚಿ ವಶಕ್ಕೆ ಪಡೆಯಲಾಯಿತು.

ನದಿ ಪಾತ್ರಗಳಲ್ಲಿ ಅಕ್ರಮ ಮರಳುಗಾರಿಕೆಯಿಂದ ನೈಸರ್ಗಿಕ ಸಂಪನ್ಮೂಲಗಳ ನಾಶವಾಗುವುದರ ಜತೆಗೆ ಪರಿಸರದ ಮೇಲೂ ದುಷ್ಪರಿಣಾಮ ಉಂಟಾಗುತ್ತಿದೆ. ಈ ಹಿನ್ನೆಲೆಯಲ್ಲಿ ಅಕ್ರಮ ಮರಳುಗಾರಿಕೆ ಹಾಗೂ ಸಾಗಣೆ ತಡೆಗಟ್ಟಲು ಅಧಿಕಾರಿಗಳು ಕಾರ್ಯಾಚರಣೆ ತೀವ್ರಗೊಳಿಸಿದ್ದಾರೆ.ಕಾರ್ಯಾಚರಣೆಯಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿ ಧನರಾಜ, ಗುತ್ತಲ ಪೊಲೀಸ್ ಠಾಣೆಯ ಪಿಎಸ್‌ಐ ಪರಶುರಾಮ ಲಮಾಣಿ, ಕಂದಾಯ ನಿರೀಕ್ಷಕ ಆರ್. ಎನ್. ಮಲ್ಲಾಡದ, ಗ್ರಾಮ ಆಡಳಿತ ಅಧಿಕಾರಿಗಳಾದ ಪ್ರಶಾಂತ, ಹೊನ್ನಪ್ಪ ಹಾಗೂ ಪೊಲೀಸ್ ಸಿಬ್ಬಂದಿ ಗುಡ್ಡಪ್ಪ ಸೇರಿದಂತೆ ವಿವಿಧ ಇಲಾಖೆಗಳ ಸಿಬ್ಬಂದಿ ಪಾಲ್ಗೊಂಡಿದ್ದರು.

ಫಸಲ್ ಭೀಮಾಯೋಜನೆ ಅನುಷ್ಠಾನಕ್ಕೆ ಸರಕಾರ ಆಸ್ತು

ಪಾಂಡವ ನ್ಯೂಸ್, ಹಾವೇರಿ : ರಾಜ್ಯದಲ್ಲಿ 2026-27 ನೇ ಸಾಲಿನ ಹಿಂಗಾರು ಮತ್ತು ಬೇಸಿಗೆ ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯನ್ನು ಅನುಷ್ಠಾನಗೊಳಿಸಲು ಜಿಲ್ಲೆಯ ಎಲ್ಲಾ ತಾಲೂಕುವಾರು ಮುಖ್ಯ ಬೆಳೆಗಳನ್ನು ಗ್ರಾಮ ಪಂಚಾಯತಿ ಮಟ್ಟಕ್ಕೆ ಹಾಗೂ ಉಳಿದ ಬೆಳೆಗಳನ್ನು ಹೋಬಳಿ ಮಟ್ಟದಲ್ಲಿ ಅನುಷ್ಠಾನಗೊಳಿಸಲು ಸರ್ಕಾರ ಮಂಜೂರಾತಿ ನೀಡಿದೆ ಎಂದು ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ತಿಳಿಸಿದ್ದಾರೆ. ಹಾವೇರಿ ಜಿಲ್ಲೆಯಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯಡಿ 2026-27 ನೇ ಸಾಲಿನಲ್ಲಿ 11 ಬೆಳೆಗಳಾದ ಜೋಳ (ನೀರಾವರಿ), ಜೋಳ (ಮಳೆ ಆಶ್ರಿತ), ಮುಸುಕಿನ ಜೋಳ (ನೀರಾವರಿ), ಗೋಧಿ (ಮಳೆ ಆಶ್ರಿತ), ಕಡಲೆ (ಮಳೆ ಆಶ್ರಿತ), ಕಡಲೆ (ನೀರಾವರಿ), ಹುರುಳಿ (ಮಳೆ ಆಶ್ರಿತ), ಹೆಸರು (ಮಳೆ ಆಶ್ರಿತ), ಸೂರ್ಯಕಾಂತಿ (ನೀರಾವರಿ), ಕುಸುಬೆ (ಮಳೆ ಆಶ್ರಿತ), ಮತ್ತು ಟೊಮ್ಯಾಟೊ-ಓಖ ಇವುಗಳನ್ನು ಹಿಂಗಾರು ಹಂಗಾಮಿಗೆ ಮತ್ತು 2 ಬೆಳೆಗಳಾದ ಭತ್ತ (ನೀರಾವರಿ), ಮತ್ತು ನೆಲಗಡಲೆ (ಶೇಂಗಾ) (ನೀರಾವರಿ) ಇವುಗಳನ್ನು ಬೇಸಿಗೆ ಹಂಗಾಮಿಗೆ ಅಧಿಸೂಚಿಸಲು ಹಾಗೂ ಇವುಗಳಲ್ಲಿ ತಾಲ್ಲೂಕುವಾರು ಮುಖ್ಯ ಬೆಳೆಗಳನ್ನು ಗ್ರಾಮ ಪಂಚಾಯತಿ ಮಟ್ಟಕ್ಕೆ (ಗ್ರಾಮ ಪಂಚಾಯತಿ ವ್ಯಾಪ್ತಿಯಿಂದ ಹೊರಗಿರುವ ಮತ್ತು ಪಟ್ಟಣ/ನಗರ ವ್ಯಾಪ್ತಿಗೆ ಸೇರುವ ಗ್ರಾಮಗಳನ್ನು ಸೇರಿಸಿದಂತೆ) ಮತ್ತು ಇತರೆ ಬೆಳೆಗಳನ್ನು ಹೋಬಳಿ ಮಟ್ಟಕ್ಕೆ ಅಳವಡಿಸಿ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲಾಗಿದೆ. ಈ ಯೋಜನೆಗೆ ಒಳಪಡುವ ವಿವಿಧ ಬೆಳೆಗಳಿಗೆ ರೈತರು ಬ್ಯಾಂಕುಗಳಿಗೆ ಹಿಂಗಾರು ಹಂಗಾಮಿಗೆ ಜೋಳ (ಮಳೆ ಆಶ್ರಿತ), ಜೋಳ (ನೀರಾವರಿ), ಕುಸುಬೆ (ಮಳೆ ಆಶ್ರಿತ), ಹಾಗೂ ಟೊಮ್ಯಾಟೊ-ಓಖ ದಿ.30-11-2026 ರೊಳಗಾಗಿ, ಕಡಲೆ (ಮಳೆ ಆಶ್ರಿತ), ಕಡಲೆ (ನೀರಾವರಿ), ಸೂರ್ಯಕಾಂತಿ (ನೀರಾವರಿ) ಹಾಗೂ ಗೋಧಿ (ಮಳೆ ಆಶ್ರಿತ) ದಿ.15-12-2026, ಹೆಸರು (ಮಳೆ ಆಶ್ರಿತ), ಹುರುಳಿ (ಮಳೆ ಆಶ್ರಿತ) ಹಾಗೂ ಮುಸುಕಿನ ಜೋಳ (ನೀರಾವರಿ) ಬೆಳೆಗಳಿಗೆ ದಿ.31-12-2026 ರೊಳಗಾಗಿ ಘೋಷಣೆಗಳನ್ನು ಸಲ್ಲಿಸಬೇಕು.ಬೇಸಿಗೆ ಹಂಗಾಮಿಗೆ ಶೇಂಗಾ (ನೀರಾವರಿ) ಹಾಗೂ ಭತ್ತ (ನೀರಾವರಿ) ಬೆಳೆಗೆ ದಿನಾಂಕ 26-02-2027ರೊಳಗಾಗಿ ಘೋಷಣೆ ಸಲ್ಲಿಸಬೇಕು. ಬೆಳೆ ಸಾಲ ಪಡೆಯದ ರೈತರು ಅರ್ಜಿಯೊಂದಿಗೆ ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಪಹಣಿ/ಕಂದಾಯ ರಶೀದಿ, ಖಾತೆ ಪುಸ್ತಕ/ಬ್ಯಾಂಕ್ ಪಾಸ್ ಪುಸ್ತಕ ಹಾಗೂ ಆಧಾರ ಕಾರ್ಡ್ ಪ್ರತಿಯನ್ನು ನೀಡಬೇಕು. ವಿಮೆ ನೋಂದಣಿ ಮಾಡುವ ಎಲ್ಲಾ ರೈತರು ಕಡ್ಡಾಯವಾಗಿ ನಿಮ್ಮ ಬ್ಯಾಂಕ್ ಖಾತೆಗಳಿಗೆ ಆಧಾರ ಸಂಖ್ಯೆಯನ್ನು ಜೋಡಣೆ(NPCI SEEDING) ಮಾಡಿಸಲು ವಿನಂತಿಸಿದೆ.ಈ ಯೋಜನೆಯಲ್ಲಿ ಪಾಲ್ಗೊಳ್ಳಲು ಇಚ್ಚಿಸುವವರು ಬ್ಯಾಂಕುಗಳು, ಸಾಮಾನ್ಯ ಸೇವಾ ಕೇಂದ್ರ (Common Service Centers), ಕರ್ನಾಟಕ ಒನ್ ಹಾಗೂ ಗ್ರಾಮ ಒನ್ ಕೇಂದ್ರಗಳ ಮೂಲಕ ನೋಂದಾಯಿಸಲು ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಇಂಡಸ್ ಇಂಡ್ ಜನರಲ್ ಇನ್ಸೂರೆನ್ಸ್ ಕಂಪನಿ ಸಂಸ್ಥೆಯ ಪ್ರತಿನಿಧಿಗಳು, ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಸಂಪರ್ಕಿಸಬಹುದೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆರೋಗ್ಯ ನಿರೀಕ್ಷಣಾಧಿಕಾರಿಗಳಿಗೆ ತರಬೇತಿ

ಪಾಂಡವ ನ್ಯೂಸ್, ಹಾವೇರಿ : ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮ ಮತ್ತು ಕೋಟ್ಪಾ ಕಾಯ್ದೆ2003 ಮತ್ತು ತಂಬಾಕು ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳು ಮತ್ತು ಚಿಕಿತ್ಸಾ ಸೌಲಭ್ಯಗಳ ಕುರಿತು ಜಿಲ್ಲೆಯ ಆಯ್ದ ಆರೋಗ್ಯ ನಿರೀಕ್ಷಣಾಧಿಕಾರಿಗಳಿಗೆ ಒಂದು ದಿನದ ತರಬೇತಿ ಕಾರ್ಯಕ್ರಮ ಹಾವೇರಿ ನಗರದ ಜಿಲ್ಲಾ ಆರೋಗ್ಯ ಭವನದಲ್ಲಿ ಶುಕ್ರವಾರ ಜರುಗಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ನಾಗರಾಜ ಅವರು ಉದ್ಘಾಟನೆ ನೆರವೇರಿಸಿದರು.

ಜಿಲ್ಲಾ ಕಾರ್ಯಕ್ರಮ ಅನುಷ್ಠಾನ ಅಧಿಕಾರಿ ಡಾ.ಜಗದೀಶ ಪಾಟೀಲ ಅವರು ಮಾತನಾಡಿ, ಜಿಲ್ಲೆಯಲ್ಲಿ ತಂಬಾಕು ನಿಯಂತ್ರಣ ಕಾಯ್ದೆ ಪರಿಣಾಮಕಾರಿ ಅನುಷ್ಠಾನಕ್ಕೆ ಆರೋಗ್ಯ ಇಲಾಖೆಯ ಆರೋಗ್ಯ ನಿರೀಕ್ಷಣಾಧಿಕಾರಿಗಳ ಪಾತ್ರ ಪ್ರಮುಖವಾಗಿದ ಎಂದು ಹೇಳಿದರು.

ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರರಾದ ಡಾ.ಸಂತೋಷ ದಡ್ಡಿ ಮತ್ತು ದಾದಾಪೀರ ಹುಲಿಕಟ್ಟಿ ಅವರು ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದ ಚುಟುವಟಿಕೆ, ತಂಬಾಕು ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳು ಮತ್ತು ಕೋಟ್ಪಾ ಕಾಯ್ದೆ2003 ಕಾಯ್ದೆ ಅನುಷ್ಠಾನ ಕುರಿತು ಉಪನ್ಯಾಸ ನೀಡಿದರು.

ವಿವಿಧ ಯೋಜನೆಗಳ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಪಾಂಡವ ನ್ಯೂಸ್, ಹಾವೇರಿ : ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಚೇತನಾ ಯೋಜನೆ, ಧನಶ್ರೀ ಯೋಜನೆ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ, ಮಾಜಿ ದೇವದಾಸಿ ಮಹಿಳೆಯರ ಪುನರ್ವಸತಿ ಯೋಜನೆ ಹಾಗೂ ಉದ್ಯೋಗಿನಿ ಯೋಜನೆ ಸೌಲಭ್ಯಕ್ಕೆ ಅರ್ಹ ಅಭ್ಯರ್ಥಿಗಳಿ

ಮೊದಲ ಪುಟದಿಂದ.....

ಯುವ ಸಂಸತ್ ಪ್ರಜಾಪ್ರಭುತ್ವದ...

ಹಾವೇಮುಲ ಅಧ್ಯಕ್ಷ ಮಂಜನಗೌಡ ಪಾಟೀಲ, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ಕಿಲ್ಲೆದಾರ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಮಹೇಶ ಕಂಬಳಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಉಪಾಧ್ಯಕ್ಷ ವಸಂತ ಲಮಾಣಿ, ತಾಲೂಕು ಅಧ್ಯಕ್ಷ ಮಂಜಪ್ಪ ಹಲವಾಗಲ, ಸರ್ಕಾರಿ ನೌಕರರ ಸಂಘದ ತಾಲೂಕು ಘಟಕದ ಅಧ್ಯಕ್ಷೆ ಪುಷ್ಪಲತಾ, ತಾಪಂ ಇಒ ಡಾ.ವೆಂಕಟೇಶ ಸಣ್ಣಬಿದರಿ, ಗ್ರೇಡ್-2 ತಹಸೀಲ್ದಾರ ಅರುಣ ಕಾರಗಿ, ನಗರಸಭೆ ಆಯುಕ್ತ ಎಫ್.ಐ.ಇಂಗಳಗಿ, ಬಿಇಒ ಶಾಮಸುಂದರ ಅಡಿಗ, ಕ್ಷೇತ್ರ ಸಮನ್ವಯಾಧಿಕಾರಿ ಮಂಜನಾಯ್ಕ, ಜಿಪಂ ಮಾಜಿ ಸದಸ್ಯ ಕೃಷ್ಣಪ್ಪ ಕಂಬಳಿ, ನಗರಸಭೆ ಮಾಜಿ ಸದಸ್ಯ ಪುಟ್ಟಪ್ಪ ಮರಿಯಮ್ಮನವರ ಸೇರಿದಂತೆ ಅಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

ಮೊದಲ ಪುಟದಿಂದ.....

ವಾಯು ಮಾಲಿನ್ಯ ನಿಯಂತ್ರಣಕ್ಕೆ .....

ವಾಹನಗಳಲ್ಲಿ ಕಲಬೆರೆಕೆ ಇಂಧನ ಬಳಸಿದಲ್ಲಿ ವಾಯುಮಾಲಿನ್ಯ ಉಂಟಾಗುತ್ತದೆ ಎಂದರು.

ಕಚೇರಿಯ ಪ್ರಥಮ ದರ್ಜೆ ಸಹಾಯಕರಾದ ಶ್ರೀಪಾದ ಜ. ಬ್ಯಾಳಿ ಮಾತನಾಡಿ, ಪ್ರತಿ ವರ್ಷದ ನವೆಂಬರ್ ಮಾಹೆಯನ್ನು ವಾಯುಮಾಲಿನ್ಯ ನಿಯಂತ್ರಣ ಮಾಸವನ್ನಾಗಿ ಸಾರಿಗೆ ಇಲಾಖೆಯ ವತಿಯಿಂದ ಆಚರಿಸಲಾಗುತ್ತಿದೆ. ವಾಯುಮಾಲಿನ್ಯದ ಹಲವಾರು ದುಷ್ಪರಿಣಾಮಗಳಿದ್ದು, ವಾಯುಮಾಲಿನ್ಯಕ್ಕೆ ಕಡಿವಾಣ ಹಾಕುವುದು ಅತೀ ಅವಶ್ಯಕವಾಗಿದೆ. ಪರಿಸರ ಸಂರಕ್ಷಣೆ, ನದಿ ಕೆರೆಗಳ ರಕ್ಷಣೆಯು ದೇಶದ ಪ್ರತಿಯೊಬ್ಬ ಪ್ರಜೆಯ ಮೂಲಭೂತ ಕರ್ತವ್ಯವಾಗಿದೆ, ಹೆಚ್ಚು ಹೆಚ್ಚು ಗಿಡಮರಗಳನ್ನು ಬೆಳೆಸಿದಲ್ಲಿ ವಾಯುಮಾಲಿನ್ಯವನ್ನು ತಗ್ಗಿಸಬಹುದಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಾಹನಗಳ ಮಾಲೀಕರುಗಳು, ವಾಹನ ಚಾಲನಾ ತರಬೇತಿ ಶಾಲೆಯ ಪ್ರತಿನಿಧಿಗಳು, ಕಚೇರಿಯ ಸಿಬ್ಬಂದಿಗಳು, ಇತರರು ಉಪಸ್ಥಿತರಿದ್ದರು. ಮೆಹಬೂಬಲಿ ಡಿ. ಹೊಟೆಗಾಳಿ ಸ್ವಾಗತಿಸಿದರು. ಶ್ರೀಪಾದ ಜ. ಬ್ಯಾಳಿಯವರ, ಕಾರ್ಯಕ್ರಮ ನಿರೂಪಿಸಿ ವಂದಿಸಿದರು

ಬಸ್ ಮತ್ತು ಬೈಕ್ ನಡುವೆ ಅಪಘಾತ ಓರ್ವ ಸಾವು ಮತ್ತೊಬ್ಬನಿಗೆ ಗಾಯ

ಪಾಂಡವ ನ್ಯೂಸ್, ಗುತ್ತಲ : ಸಮೀಪದ ಬಸಾಪುರ ಗ್ರಾಮದ ಹೊರವಲಯದ ಹಾವೇರಿ ಹಾಗೂ ಗುತ್ತಲ ರಸ್ತೆಯಲ್ಲಿ ಕೆ.ಎಸ್.ಆರ್.ಟಿ.ಸಿ ಬಸ್ಸ್ ಹಾಗೂ ಬೈಕ್ ನಡುವೆ ಅಪಘಾತ ವಾಗಿದ್ದು ಅಪಘಾತದಲ್ಲಿ ಓರ್ವ ವ್ಯಕ್ತಿ ಮೃತಪಟ್ಟಿದ್ದು, ಮತ್ತೊರ್ವ ವ್ಯಕ್ತಿ ಗಾಯಗೊಂಡ ಘಟನೆ ನಡೆದಿದೆ.

ಅಪಘಾತದಲ್ಲಿ ಮೃತಪಟ್ಟ ವ್ಯಕ್ತಿಯನ್ನು ಬಸಾಪುರ ಗ್ರಾಮದ ಕೋಟೆಪ್ಪ ಹನುಮಂತಪ್ಪ ಚಾವಡಿ(55) ಎಂದು ಗುರುತಿಸಲಾಗಿದೆ. ಗಾಯಾಳು ಬೀರಪ್ಪ ಕೋಟೆಪ್ಪ ಚಾವಡಿ ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ತಿಳಿದು ಬಂದಿದೆ. ಈ ಕುರಿತು ಗುತ್ತಲ ಪೋಲಿಸ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಅಗತ್ಯ ವಸ್ತುಗಳ ಬೆಲೆ ಏರಿಕೆ, ಬಸ್ ಪ್ರಯಾಣ ದರ ಹೆಚ್ಚಳಕ್ಕೆ ಜೆಡಿಎಸ್ ಖಂಡನೆ



ಪಾಂಡವ ನ್ಯೂಸ್, ಗುತ್ತಲ : ರಾಜ್ಯದಲ್ಲಿ ಬರಗಾಲದ ಪರಿಸ್ಥಿತಿಯಿಂದ ಜನರು ಹಾಗೂ ರೈತರು ಈಗಾಗಲೇ ಸಂಕಷ್ಟದಲ್ಲಿದ್ದಾರೆ. ಇಂತಹ ಸಂದರ್ಭದಲ್ಲಿ ದಿನಬಳಕೆಯ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗುತ್ತಿರುವ ಬೆನ್ನಲ್ಲೇ ರಾಜ್ಯ ಸರ್ಕಾರ ಬಸ್ ಪ್ರಯಾಣ ದರ, ಹಾಲು ಮತ್ತು ಮೊಸರಿನ ಬೆಲೆ ಹೆಚ್ಚಳಕ್ಕೆ ಮುಂದಾಗಿರುವುದನ್ನು ಜೆಡಿಎಸ್ ರಾಜ್ಯ ಉಪಾಧ್ಯಕ್ಷ ಕೆ.ಎಸ್. ಸಿದ್ದಬಸಪ್ಪ ಯಾದವ್ ತೀವ್ರವಾಗಿ ಖಂಡಿಸಿದ್ದಾರೆ.

ಮಹಿಳೆಯರಿಗೆ ಉಚಿತ ಬಸ್ ಪ್ರಯಾಣದ ಸೌಲಭ್ಯ ಕಲ್ಪಿಸಿರುವ ಸರ್ಕಾರ, ಇದೀಗ ಬಸ್ ಪ್ರಯಾಣ ದರ ಹೆಚ್ಚಿಸುವ ಮೂಲಕ ಪುರುಷ ಪ್ರಯಾಣಿಕರ ಜೇಬಿಗೆ ಕತ್ತರಿ ಹಾಕಿದೆ. ಮತ್ತೊಂದೆಡೆ ಹಾಲು ಮತ್ತು ಮೊಸರಿನ ಬೆಲೆ ಏರಿಕೆಯಿಂದ ಸಾಮಾನ್ಯ ಕುಟುಂಬಗಳ ದೈನಂದಿನ ಖರ್ಚಿನ ಹೊರೆ ಹೆಚ್ಚಾಗಲಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.ಹಾಲು ಮತ್ತು ಮೊಸರು ಪ್ರತಿಯೊಂದು ಕುಟುಂಬದ ಅಗತ್ಯ ವಸ್ತುಗಳಾಗಿವೆ. ಬಡವರು, ಮಧ್ಯಮ ವರ್ಗದವರು, ಕೂಲಿ ಕಾರ್ಮಿಕರು ಸೇರಿದಂತೆ ಎಲ್ಲ ವರ್ಗದ ಜನರು ಪ್ರತಿದಿನ ಇವುಗಳನ್ನು ಖರೀದಿಸುತ್ತಾರೆ. ಈಗಾಗಲೇ ಹಲವು ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ತತ್ತರಿಸಿರುವ ಜನರಿಗೆ ಸರ್ಕಾರದ ಈ ನಿರ್ಧಾರ ಮತ್ತಷ್ಟು ಆರ್ಥಿಕ ಸಂಕಷ್ಟ ತಂದೊಡ್ಡಲಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.ಜನರಿಗೆ ಅನುಕೂಲ ಕಲ್ಪಿಸಬೇಕಾದ ಸರ್ಕಾರವೇ ಒಂದರ ಹಿಂದೆ ಒಂದರಂತೆ ಬೆಲೆ ಏರಿಕೆ ಮಾಡುವ ಮೂಲಕ ಜನಸಾಮಾನ್ಯರ ಬದುಕನ್ನು ದುಸ್ತರಗೊಳಿಸುತ್ತಿರುವುದು ಎಷ್ಟು ಸಮಂಜಸ ಎಂದು ಪ್ರಶ್ನಿಸಿದ್ದಾರೆ.ಚುನಾವಣೆ ಸಂದರ್ಭದಲ್ಲಿ ಜನರಿಗೆ ನೀಡಿದ ಭರವಸೆಗಳು ಬದುಕನ್ನು ಸುಧಾರಿಸುವಂತಿರಬೇಕೇ ಹೊರತು, ಜನರ ದೈನಂದಿನ ಜೀವನವನ್ನು ಸಂಕಷ್ಟಕ್ಕೆ ದೂಡುವಂತಿರಬಾರದು. ಬೆಲೆ ಏರಿಕೆಯಿಂದ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಆದ್ದರಿಂದ ರಾಜ್ಯ ಸರ್ಕಾರ ಕೂಡಲೇ ಬಸ್ ಪ್ರಯಾಣ ದರ ಹಾಗೂ ಹಾಲು, ಮೊಸರಿನ ಬೆಲೆ ಏರಿಕೆ ನಿರ್ಧಾರವನ್ನು ಹಿಂಪಡೆಯಬೇಕು ಎಂದು ಆಗ್ರಹಿಸಿದ್ದಾರೆ.ಸರ್ಕಾರ ಬೆಲೆ ಏರಿಕೆ ನಿರ್ಧಾರವನ್ನು ಹಿಂಪಡೆಯಲು ವಿಫಲವಾದರೆ ಜೆಡಿಎಸ್ ವತಿಯಿಂದ ರಾಜ್ಯಾದ್ಯಂತ ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಕೆ.ಎಸ್. ಸಿದ್ದಬಸಪ್ಪ ಯಾದವ್ ಎಚ್ಚರಿಕೆ ನೀಡಿದ್ದಾರೆ.

ಸಾರ್ವಜನಿಕರಿಗೆ ಕರೆ

ಪಾಂಡವ ನ್ಯೂಸ್, ಬಳ್ಳಾರಿ : ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬಳ್ಳಾರಿ ಇವರ ಸಂಯುಕ್ತ ಆಶ್ರಯದಲ್ಲಿ ಡಿಸೆಂಬರ್ 12 ರಂದು ಜಿಲ್ಲಾ ನ್ಯಾಯಾಲಯ ಒಳಗೊಂಡಂತೆ ತಾಲೂಕು ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ಅನ್ನು ಆಯೋಜಿಸಲಾಗಿದೆ.ಈ ಅದಾಲತ್ ನಲ್ಲಿ ವ್ಯಾಜ್ಯ ಪೂರ್ವ ಪ್ರಕರಣಗಳು, ರಾಜಿಯಾಗಬಹುದಾದ ಅಪರಾಧಿಕ ಪ್ರಕರಣಗಳು, ಚೆಕ್ ಅಮಾನ್ಯ ಪ್ರಕರಣಗಳು, ಬ್ಯಾಂಕ್ ಸಂಬಂಧಿತ ವ್ಯಾಜ್ಯಗಳು, ಮೋಟಾರು ವಾಹನ ಅಪಘಾತ ಪರಿಹಾರ ನ್ಯಾಯಾಧಿಕರಣದ ಪ್ರಕರಣಗಳು, ವೈವಾಹಿಕ ಹಾಗೂ ಕೌಟುಂಬಿಕ ಸಮಸ್ಯೆಗಳು, ಸಿವಿಲ್ ವ್ಯಾಜ್ಯಗಳು ಸೇರಿದಂತೆ ಕಾನೂನಿನಡಿ ಇತ್ಯರ್ಥಪಡಿಸಬಹುದಾದ ವಿವಿಧ ಪ್ರಕರಣಗಳನ್ನು ತ್ವರಿತವಾಗಿ ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.ಬಳ್ಳಾರಿ ಜಿಲ್ಲೆಯ ಒಟ್ಟು 18 ನ್ಯಾಯಾಲಯಗಳಲ್ಲಿ ಈ ಅದಾಲತ್ ನಡೆಯಲಿದ್ದು, ಪ್ರಕರಣಗಳ ಶೀಘ್ರ ಇತ್ಯರ್ಥಕ್ಕಾಗಿ ಈಗಾಗಲೇ ಈ ಎಲ್ಲಾ ನ್ಯಾಯಾಲಯಗಳಲ್ಲಿ ಪ್ರತಿದಿನ ಪೂರ್ವಭಾವಿ ಬೈಠಕ್ ಗಳು ನಡೆಯುತ್ತಿವೆ.ಹೆಚ್ಚಿನ ವಿವರಗಳಿಗಾಗಿ ಸಾರ್ವಜನಿಕರು ಬಳ್ಳಾರಿಯ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳ ಕಚೇರಿಯನ್ನು ಸಂಪರ್ಕಿಸಬಹುದುಸಾರ್ವಜನಿಕರು ಹಾಗೂ ಕಕ್ಷಿದಾರರು ಈ ಪೂರ್ವಭಾವಿ ಸಭೆಗಳ ಪ್ರಯೋಜನ ಪಡೆದುಕೊಂಡು ತಮ್ಮ ವಿವಾದಗಳನ್ನು ಸೌಹಾರ್ದಯುತವಾಗಿ ಅಂತ್ಯಗೊಳಿಸಿಕೊಳ್ಳುವಂತೆ ಬಳ್ಳಾರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಸಿದ್ದಲಿಂಗ ಪ್ರಭು ಅವರು ತಿಳಿಸಿದ್ದಾರೆ.

ಬೇಡ್ತಿ-ವರದಾ ನದಿ ಜೋಡಣೆಗೆ ಜನಾಂದೋಲನ ಅಗತ್ಯ: ರವಿಕಾಂತ ಅಂಗಡಿ

ಪಾಂಡವ ನ್ಯೂಸ್, ಹಾವೇರಿ : ಬೇಡ್ತಿ-ವರದಾ ನದಿ ಜೋಡಣೆ ಯೋಜನೆ ಸಾಕಾರಗೊಳ್ಳಲು ಎಲ್ಲ ಸಂಘಟನೆಗಳು, ಮಠಾಧೀಶರು ಹಾಗೂ ಜನಪ್ರತಿನಿಧಿಗಳ ವಿಶ್ವಾಸ ಪಡೆದು ಜನಸಾಮಾನ್ಯರ ಬೃಹತ್ ಆಂದೋಲನ ರೂಪಿಸುವ ಅಗತ್ಯವಿದೆ ಎಂದು ವಕೀಲ ಹಾಗೂ ಉತ್ತರ ಕರ್ನಾಟಕ ಮಹಾಸಭಾದ ರವಿಕಾಂತ ಅಂಗಡಿ ಹೇಳಿದರು.ನಗರದ ಹುಕ್ಕೇರಿಮಠದ ಆವರಣದಲ್ಲಿ ಬೇಡ್ತಿ-ವರದಾ ನದಿ ಜೋಡಣೆ ಯೋಜನೆ ಕುರಿತು ಆಯೋಜಿಸಿದ್ದ ಸಭೆಯಲ್ಲಿ ಮಾತನಾಡಿದ ಅವರು, ಉತ್ತರ ಕರ್ನಾಟಕದ ಸಮಗ್ರ ನೀರಾವರಿ ಹಾಗೂ ಕೃಷಿ ಅಭಿವೃದ್ಧಿಯ ದೃಷ್ಟಿಯಿಂದ ಈ ಯೋಜನೆ ಮಹತ್ವದ್ದಾಗಿದೆ. ಗದಗ ಜಿಲ್ಲೆಯ ಶಿರಹಟ್ಟಿ, ಲಕ್ಷ್ಮೇಶ್ವರ, ಮುಂಡರಗಿ ಹಾಗೂ ಗದಗ ಸೇರಿದಂತೆ ವಿವಿಧ ಭಾಗಗಳಿಗೆ ಸಮರ್ಪಕ ನೀರಾವರಿ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಸಂಘಟಿತ ಹೋರಾಟ ನಡೆಸಬೇಕಿದೆ ಎಂದರು.



ಪ್ರಸ್ತುತ ಅಭಿವೃದ್ಧಿ ಕಾಮಗಾರಿಗಳ ಕುರಿತು ಚರ್ಚಿಸಿ, ಅಗತ್ಯಬಿದ್ದಾಗ ಹೋರಾಟ ರೂಪಿಸಬಹುದು. ಆದರೆ, ಬೇಡ್ತಿ-ವರದಾ ನದಿ ಜೋಡಣೆ ಸಭೆ ಮುಂದಿನ ಪೀಳಿಗೆಯ ಭವಿಷ್ಯ ರೂಪಿಸುವ ಮಹತ್ವದ ವೇದಿಕೆಯಾಗಿದೆ. ಇಂತಹ ಬೃಹತ್ ಯೋಜನೆಗಳು ಸುಲಭವಾಗಿ ಅನುಷ್ಠಾನಗೊಳ್ಳುವುದಿಲ್ಲ. ಹಲವು ಹಂತಗಳ ಪರಿಶೀಲನೆ, ತಾಂತ್ರಿಕ ಅಧ್ಯಯನ ಹಾಗೂ ಸರ್ಕಾರದ ಅನುಮೋದನೆ ಅಗತ್ಯವಾಗುತ್ತದೆ. ಹೀಗಾಗಿ ಯೋಜನೆಗೆ ಎಲ್ಲರೂ ಒಗ್ಗಟ್ಟಿನಿಂದ ಧ್ವನಿ ಎತ್ತಬೇಕು ಎಂದು ತಿಳಿಸಿದರು.ಯೋಜನೆ ಜಾರಿಗೆ ನಿರಂತರ ಪ್ರಯತ್ನ ಮತ್ತು ಸುದೀರ್ಘ ಹೋರಾಟ ಅನಿವಾರ್ಯ. ಯಾವುದೇ ಸಂಘಟನೆ ಅಥವಾ ವ್ಯಕ್ತಿಯ ಹೋರಾಟಕ್ಕೆ ಸೀಮಿತವಾಗದೆ, ಜನರ ಪಾಲ್ಗೊಳ್ಳುವಿಕೆಯೊಂದಿಗೆ ವ್ಯಾಪಕ ಜನಾಂದೋಲನ ರೂಪಿಸಿದಾಗ ಮಾತ್ರ ಸರ್ಕಾರದ ಗಮನ ಸೆಳೆಯಲು ಸಾಧ್ಯವಾಗುತ್ತದೆ ಎಂದು ಹೇಳಿದರು.ಸಭೆಯಲ್ಲಿ ಬಾಲೇಹೊಸೂರ-ಶಿರಹಟ್ಟಿಯ ಜಗದ್ಗುರು ಶ್ರೀ ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು, ಹಾವೇರಿ ಹುಕ್ಕೇರಿಮಠದ ಶ್ರೀ ಸದಾಶಿವ ಮಹಾಸ್ವಾಮಿಗಳು, ಬಾಳೂರಿನ ಅಡವಿಸ್ವಾಮಿಮಠದ ಶ್ರೀ ಕುಮಾರ ಮಹಾಸ್ವಾಮಿಗಳು, ನೆಗಳೂರಿನ ಶ್ರೀ ಗುರುಶಾಂತೇಶ್ವರ ಮಹಾಸ್ವಾಮಿಗಳು, ನಾಗವಂದದ ಶ್ರೀ ಶಿವಯೋಗಿ ಶಿವಾಚಾರ್ಯ ಮಹಾಸ್ವಾಮಿಗಳು, ಹಾವೇರಿಯ ಹೊಸಮಠದ ಶ್ರೀ ಬಸವ ಶಾಂತಲಿಂಗ ಮಹಾಸ್ವಾಮಿಗಳು, ಅಗಡಿಯ ಅಕ್ಕಿಮಠದ ಶ್ರೀ ಗುರುಲಿಂಗ ಮಹಾಸ್ವಾಮಿಗಳು ಹಾಗೂ ಕೂಡಲದ ಗುರು ನಂಜೇಶ್ವರ ಮಠದ ಶ್ರೀ ಗುರು ಮಹೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು.ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ, ಮಾಜಿ ಸಂಸದ ಮಂಜುನಾಥ ಕುನ್ನೂರ, ಶಾಸಕರಾದ ಬಸವರಾಜ ಶಿವಣ್ಣನವರ, ಯು.ಬಿ. ಬಣಕಾರ, ಶ್ರೀನಿವಾಸ ಮಾನೆ, ಮಾಜಿ ಶಾಸಕರಾದ ಶಿವರಾಜ ಸಜ್ಜನ, ವೀರಭದ್ರಪ್ಪ ಬಳ್ಳಾರಿ, ರೈತ ಸಂಘದ ಅಧ್ಯಕ್ಷ ರಾಮಣ್ಣ ಕೆಂಚಳ್ಳೇರ, ಮಲ್ಲಿಕಾರ್ಜುನ ಬಳ್ಳಾರಿ, ವಕೀಲ ಸಂದೀಪ ಪಾಟೀಲ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

ಪಂಚಮಸಾಲಿ ಮಹಿಳಾ ಘಟಕದಿಂದ ಡಾ. ಎಸ್.ಎಂ. ಎಲ್ಲಿ ಅವರಿಗೆ ಸನ್ಮಾನ



ಪಾಂಡವ ನ್ಯೂಸ್, ದಾವಣಗೆರೆ : ಪಂಚಮಸಾಲಿ ಸಮಾಜದ ಮಹಿಳಾ ಘಟಕದ ವತಿಯಿಂದ ನಗರದ ಖ್ಯಾತ ವೈದ್ಯ ಡಾ. ಎಸ್.ಎಂ. ಎಲ್ಲಿ ಅವರನ್ನು ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು.

ವೈದ್ಯಕೀಯ ಕ್ಷೇತ್ರದಲಿ ತಮ್ಮದೇಆದ ಸೇವೆ ಹಾಗೂ ಸಾಧನೆಯ ಮೂಲಕ ಗುರುತಿಸಿಕೊಂಡಿರುವಡಾ. ಎಸ್. ಎಂ. ಎಲ್ಲಿ ಅವರ ಕಾರ್ಯವನ್ನು ಗುರುತಿಸಿ ಮಹಿಳಾ ಘಟಕದ ವತಿಯಿಂದ ಗೌರವ ಸಮರ್ಪಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಮಹಿಳಾ ಘಟಕದ ಪದಾಧಿಕಾರಿಗಳು, ವೈದ್ಯಕೀಯ ಸೇವೆ ಎಂಬುದು ಕೇವಲ ವೃತ್ತಿಯಲ್ಲ,

ಅದು ಸಮಾಜದ ಆರೋಗ್ಯ ಮತ್ತುಜನರ ಬದುಕಿನೊಂದಿಗೆ ಬೆಸೆದುಕೊಂಡಿರುವ ಮಹತ್ವದ ಜವಾಬ್ದಾರಿಯಾಗಿದೆ.

ರೋಗಿಗಳಿಗೆ ಸೂಕ್ತ ಚಿಕಿತ್ಸೆ ನೀಡುವುದರ ಜತೆಗೆ ಮಾನವೀಯ ಕಾಳಜಿ ಮತ್ತು ಸೇವಾ ಮನೋಭಾವ ಹೊಂದಿರುವ ವೈದ್ಯರ ಕೊಡುಗೆ ಸಮಾಜಕ್ಕೆ ಅತ್ಯಂತ ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಸಮಾಜದ ಪ್ರತಿಭಾವಂತರು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವವರನ್ನು ಗುರುತಿಸಿ ಗೌರವಿಸುವ ಮೂಲಕ ಮುಂದಿನ ಪೀಳಿಗೆಗೆ ಪ್ರೇರಣೆ ನೀಡುವುದು ಘಟಕದ ಉದ್ದೇಶವಾಗಿದೆ. ಇಂತಹ ಕಾರ್ಯಕ್ರಮಗಳು ಸಮಾಜದಲ್ಲಿ ಪರಸ್ಪರ ಗೌರವ, ಸಹಕಾರ ಮತ್ತು ಸಂಘಟನಾ ಮನೋಭಾವವನ್ನು ಹೆಚ್ಚಿಸುತ್ತವೆ ಎಂದು ತಿಳಿಸಿದರು.

ಸನ್ಮಾನಸ್ವೀಕರಿಸಿದ ಡಾ. ಎಸ್.ಎಂ. ಎಲ್ಲಿ ಅವರು ಗೌರವಕ್ಕೆ ಕೃತಜ್ಞತೆ ಸಲ್ಲಿಸಿ, ಸಮಾಜದ ಪ್ರೀತಿ ಮತ್ತು ವಿಶ್ವಾಸ ವೈದ್ಯಕೀಯ ಸೇವೆಯಲ್ಲಿ ಇನ್ನಷ್ಟು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಲು ಪ್ರೇರಣೆ ನೀಡುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಪಂಚಮಸಾಲಿ ಮಹಿಳಾ ಘಟಕದ ಪದಾಧಿಕಾರಿಗಳು, ಸಮಾಜದ ಮುಖಂಡರು, ಮಹಿಳಾ ಸದಸ್ಯರು ಹಾಗೂ ಹಿತೈಷಿಗಳು ಪಾಲ್ಗೊಂಡಿದ್ದರು

ಪ್ರಜಾಪ್ರಭುತ್ವದ ಮೌಲ್ಯಗಳನ್ನು ಅರಿತುಕೊಂಡು ಯುವಕರು ದೇಶದ ಅಭಿವೃದ್ಧಿಗೆ ಕೈಜೋಡಿಸಲಿ: ಶಾಸಕ ಎಸ್.ವಿ. ಸಂಕನೂರ

ಪಾಂಡವ ನ್ಯೂಸ್, ಗದಗ : ದೇಶದ ಭವಿಷ್ಯ ಯುವಜನತೆಯ ಕೈಯಲ್ಲಿದ್ದು, ಯುವಕರೇ ದೇಶದ ನಿಜವಾದ ಸಂಪತ್ತು ಹಾಗೂ ಆಶಾಕಿರಣವಾಗಿದ್ದಾರೆ. ಯುವಕರು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಅರಿತುಕೊಳ್ಳುವುದರ ಜೊತೆಗೆ, ನಾಯಕತ್ವ ಗುಣಗಳನ್ನು ಬೆಳೆಸಿಕೊಂಡು ದೇಶದ ಅಭಿವೃದ್ಧಿಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ವಿಧಾನ ಪರಿಷತ್ ಶಾಸಕ ಎಸ್.ವಿ. ಸಂಕನೂರ ಹೇಳಿದರು.

ಶುಕ್ರವಾರ ಅವರು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ನಿಮಿತ್ತ ಜಿಲ್ಲಾಡಳಿತದಲ್ಲಿ ಆಯೋಜಿಸಲಾದ ಯುವ ಸಂಸತ್ತು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.ಯುವ ಸಂಸತ್ತು ಕಾರ್ಯಕ್ರಮಕ್ಕೆ ಚಾಲನೆ ನೀಡಿರುವುದು ಹೆಮ್ಮೆಯ ಸಂಗತಿಯಾಗಿದೆ. ದೇಶವನ್ನು ಮುನ್ನಡೆಸುವ ಶಕ್ತಿ ಯುವಜನತೆಯಲ್ಲಿದೆ. ಯುವಕರಲ್ಲಿ ನಾಯಕತ್ವದ ಗುಣ, ಸಾಮಾಜಿಕ ಕಳಕಳಿ ಹಾಗೂ ಪ್ರಜಾಪ್ರಭುತ್ವದ ಆಶಯಗಳನ್ನು ಬೆಳೆಸುವ ಉದ್ದೇಶದಿಂದ ಯುವ ಸಂಸತ್ತನ್ನು ಆಯೋಜಿಸಲಾಗಿದೆ. ಯುವಕರು ದೇಶದ ಆಡಳಿತ ವ್ಯವಸ್ಥೆ, ಪ್ರಜಾಪ್ರಭುತ್ವದ ಆಶಯಗಳು ಹಾಗೂ ಸಂವಿಧಾನಿಕ ಮೌಲ್ಯಗಳ ಕುರಿತು ಆಳವಾದ ಅರಿವು ಹೊಂದಬೇಕು ಎಂದರು.

ಸಮಾಜದಲ್ಲಿ ಅರ್ಹತೆ ಮತ್ತು ಸಾಮರ್ಥ್ಯ ಹೊಂದಿರುವವರಿಗೆ ಸೂಕ್ತ ಸ್ಥಾನಮಾನ ಹಾಗೂ ಅವಕಾಶಗಳನ್ನು ಕಲ್ಪಿಸಿದಾಗ ಮಾತ್ರ ವ್ಯವಸ್ಥೆ ಸರಿಯಾದ ದಿಕ್ಕಿನಲ್ಲಿ ಸಾಗಲು ಸಾಧ್ಯ. ಸರ್ಕಾರದ ಆದ್ಯತೆಗಳಿಗೆ ಅನುಗುಣವಾಗಿ ಅಭಿವೃದ್ಧಿ ಕಾಮಗಾರಿಗಳು ಹಾಗೂ ವಿವಿಧ ಯೋಜನೆಗಳು ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳಬೇಕು. ಈ ನಿಟ್ಟಿನಲ್ಲಿ ಎಲ್ಲರ ಸಹಭಾಗಿತ್ವ ಅತ್ಯಂತ ಅಗತ್ಯವಾಗಿದೆ ಎಂದು ತಿಳಿಸಿದರು.



ಯುವ ಸಂಸತ್ತು ಕೇವಲ ಸಭಾ ಕಾರ್ಯಕ್ರಮಕ್ಕೆ ಸೀಮಿತವಾಗದೆ, ಜಿ

ಪ್ರಮುಖ ಸಂಕ್ಷಿಪ್ತ ಸುದ್ದಿ

ಬಸ್ ದರ ಏರಿಕೆ ಜನಸಾಮಾನ್ಯರಿಗೆ ಮತ್ತೊಂದು ಹೊರೆ: ರವಿಕಾಂತ ಅಂಗಡಿ

ಪಾಂಡವ ನ್ಯೂಸ್, ಶಿರಹಟ್ಟಿ: ಬೆಲೆ ಏರಿಕೆಯಿಂದ ಸಂಕಷ್ಟದಲ್ಲಿರುವ ಜನಸಾಮಾನ್ಯರ ಮೇಲೆ ಬಸ್ ಪ್ರಯಾಣ ದರ ಹೆಚ್ಚಿಸುವ ಮೂಲಕ ಕಾಂಗ್ರೆಸ್ ಸರ್ಕಾರ ಮತ್ತೊಂದು ಆರ್ಥಿಕ ಹೊರೆ ಹೊರಿಸಿದೆ ಎಂದು ಉತ್ತರ ಕರ್ನಾಟಕ ಮಹಾಸಭಾದ ಅಧ್ಯಕ್ಷ, ವಕೀಲ ರವಿಕಾಂತ ಅಂಗಡಿ ಆಕ್ಷೇಪಿಸಿದ್ದಾರೆ.

ಹಾಲು, ಮೊಸರು ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಏರಿಕೆಯ ಬೆನ್ನಲ್ಲೇ ಬಸ್ ಪ್ರಯಾಣ ದರವನ್ನೂ ಹೆಚ್ಚಿಸಿರುವುದು ವಿದ್ಯಾರ್ಥಿಗಳು, ಕಾರ್ಮಿಕರು, ನೌಕರರು, ರೈತರು ಹಾಗೂ ಗ್ರಾಮೀಣ ಪ್ರಯಾಣಿಕರ ದೈನಂದಿನ ಬದುಕಿನ ಮೇಲೆ ಪರಿಣಾಮ ಬೀರಲಿದೆ. ಸರ್ಕಾರಿ ಸಾರಿಗೆಯನ್ನೇ ಅವಲಂಬಿಸಿರುವ ಜನರಿಗೆ ದರ ಏರಿಕೆ ಹೊರೆಯಾಗಲಿದೆ ಎಂದು ತಿಳಿಸಿದ್ದಾರೆ.

ಸಾರಿಗೆ ಸಂಸ್ಥೆಗಳ ಆರ್ಥಿಕ ಪರಿಸ್ಥಿತಿ ಸುಧಾರಿಸಲು ಪರ್ಯಾಯ ಮಾರ್ಗಗಳನ್ನು ಕಂಡುಕೊಳ್ಳಬೇಕು. ಗ್ಯಾರಂಟಿ ಯೋಜನೆಗಳ ವೆಚ್ಚ ಹಾಗೂ ಆಡಳಿತಾತ್ಮಕ ನಿರ್ವಹಣೆಯ ಹೊರೆ ಜನರ ಮೇಲೆ ಹಾಕುವುದು ಸರಿಯಲ್ಲ. ಸಾರ್ವಜನಿಕ ಸಾರಿಗೆ ಜನಸ್ನೇಹಿಯಾಗಿರಬೇಕೇ ಹೊರತು, ದರ ಏರಿಕೆಯ ಮೂಲಕ ಜನರಿಗೆ ಹೊರೆಯಾಗಬಾರದು. ಸರ್ಕಾರ ಕೂಡಲೇ ಬಸ್ ಪ್ರಯಾಣ ದರ ಏರಿಕೆ ನಿರ್ಧಾರವನ್ನು ಮರುಪರಿಶೀಲಿಸಿ ಹಿಂಪಡೆಯಬೇಕು ಎಂದು ಆಗ್ರಹಿಸಿದ್ದಾರೆ.

ವ್ಯಕ್ತಿ ನಾಪತ್ತೆ – ಪತ್ತೆಗೆ ಮನವಿ

ಪಾಂಡವ ನ್ಯೂಸ್, ಬಳ್ಳಾರಿ : ನಗರದ ಮಿಲ್ಲರ್ ಪೇಟೆಯ ನಿವಾಸಿ ಮಹಮ್ಮದ್ ಮುನ್ನಿಸಾ ಅಲಿಯಾಸ್ ಮುನೀರ್ (42) ಎಂಬುವವರು ಅಕ್ಟೋಬರ್ 22ರಿಂದ ಕಾಣೆಯಾಗಿದ್ದು, ಈ ಕುರಿತು ಬಳ್ಳಾರಿ ಎ.ಪಿ.ಎಂ.ಸಿ ಯಾರ್ಡ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಪತ್ತೆಗೆ ಸಹಕರಿಸಬೇಕು ಎಂದು ಠಾಣಾಧಿಕಾರಿ ಮನವಿ ಮಾಡಿದ್ದಾರೆ.ಕಾಣೆಯಾದ ವ್ಯಕ್ತಿಯ ಚಹರೆ ಮತ್ತು ವಿವರ:ಸುಮಾರು 5.6 ಅಡಿ ಎತ್ತರ, ಕೆಂಪನೆ ಮೈಬಣ್ಣ, ದುಂಡು ಮುಖ, ತೆಳ್ಳನೆಯ ಶರೀರ ಹೊಂದಿದ್ದು, ಬೆನ್ನಿನ ಬಲಭಾಗದಲ್ಲಿ ಒಂದು ಕಪ್ಪು ಮಚ್ಚೆ ಇದೆ. ಕಾಣೆಯಾದ ಸಂದರ್ಭದಲ್ಲಿ ನೇರಳೆ ಬಣ್ಣದ ತುಂಬು ತೋಳಿನ ಅಂಗಿ ಮತ್ತು ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಹಿಂದಿ ಮತ್ತು ಕನ್ನಡ ಭಾಷೆ ಮಾತನಾಡುತ್ತಾನೆ. ಕಾಣೆಯಾದ ವ್ಯಕ್ತಿಯ ಬಗ್ಗೆ ಯಾರಿಗಾದರೂ ಮಾಹಿತಿ ದೊರೆತರೆ ಎ.ಪಿ.ಎಂ.ಸಿ ಯಾರ್ಡ್ ಪೊಲೀಸ್ ಠಾಣೆ: 08392–250033, 9480803096, ಪೊಲೀಸ್ ಕಂಟ್ರೋಲ್ ರೂಂ, ಬಳ್ಳಾರಿ: 08392–258100ಗೆ ಕರೆ ಮಾಡಿ ಮಾಹಿತಿ ನೀಡಬಹುದಾಗಿದೆ ಎಂದು ಪ್ರಕಟಣೆಯಲ್ಲಿ ಕೋರಿದ್ದಾರೆ.

ಅಪರಿಚಿತ ವ್ಯಕ್ತಿ ಸಾವು

ಪಾಂಡವ ನ್ಯೂಸ್, ಹುಬ್ಬಳ್ಳಿ : ಮುಗದ–ಕಂಬಾರಗಣವಿ ರೈಲ್ವೆ ನಿಲ್ದಾಣಗಳ ಮಧ್ಯೆ ರೈಲು ಗಾಡಿಯಿಂದ ಬಿದ್ದು ಅಪರಿಚಿತ ವ್ಯಕ್ತಿಯೊಬ್ಬರು ನವೆಂಬರ್ 3 ರಂದು ಮೃತಪಟ್ಟಿದ್ದಾರೆ. ಅಪರಿಚಿತ ವ್ಯಕ್ತಿಯು ಸುಮಾರು 60–75 ವರ್ಷದವರಾಗಿದ್ದು, 5.6' ಅಡಿ ಎತ್ತರ, ಕೋಲು ಮುಖ, ಗೋಧಿ ಮೈಬಣ್ಣ, ಮೈಯಿಂದಕೃಷ ಶರೀರ, ನೇರ ಮೂಗು, ಸಣ್ಣಗಡ್ಡ ಮೀಸೆ ಬಿಟ್ಟಿರುತ್ತಾನೆ. ಒಂದು ಬಿಳಿ ಬಣ್ಣದಜುಬ್ಬ ಮತ್ತು ಒಂದು ಬಿಳಿ ಬಣ್ಣದ ಪೈಜಾಮ ಇರುತ್ತದೆ. ಅಪರಿಚಿತ ವ್ಯಕ್ತಿಯ ವಾರಸುದಾರರು ಯಾರಾದರೂ ಇದ್ದರೆ ಹುಬ್ಬಳ್ಳಿ ರೈಲ್ವೆ ಪೊಲೀಸ್ ಠಾಣಿ ದೂರವಾಣಿ 0836– 2364751 & 9480802126 ಸಂಪರ್ಕಿಸುವಂತೆ ರೈಲ್ವೆ ಪೊಲೀಸ್‌ಠಾಣೆಯ ಪೊಲೀಸ ಉಪ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕುಮ್ಮೂರು ಗ್ರಾಮದಲ್ಲಿ ಪ್ರಜಾಸೇವೆ ಕಾರ್ಯಕ್ರಮ ಇಂದು

ಪಾಂಡವ ನ್ಯೂಸ್, ಬ್ಯಾಡಗಿ : ತಾಲೂಕಿನ ಕುಮ್ಮೂರು ಗ್ರಾಮದಲ್ಲಿ ಹೋಬಳಿ ಮಟ್ಟದ ಪ್ರಜಾಸೇವೆ ಕಾರ್ಯಕ್ರಮ ನ. 7 ರಂದು ಶನಿವಾರ ಬೆಳಗ್ಗೆ 10 ಗಂಟೆಗೆ ಇಲ್ಲಿನ ಫಾಸಿ ಪ್ರಭಾವತಿ ಪ್ರೌಢಶಾಲೆಯಲ್ಲಿ ಜರುಗಲಿದೆ. ಸಭೆಯಲ್ಲಿ ತಾಲೂಕಿನ ಎಲ್ಲ ಇಲಾಖೆ ಅಧಿಕಾರಿಗಳು, ಪಿಡಿಓ, ಗ್ರಾಮಲೆಕ್ಕಾಧಿಕಾರಿಗಳು, ಸಂಬಂಧಿಸಿದ ಅಧಿಕಾರಿಗಳ ತಂಡ ಆಗಮಿಸಲಿದೆ.ಶಾಸಕ ಬಸವರಾಜ ಶಿವಣ್ಣನವರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಗ್ರಾಮಸ್ಥರು ಆಯಾ ಇಲಾಖೆಗಳ ಪೋರ್ಟಲ್‌ಗಳಲ್ಲಿ ಅರ್ಜಿ ನೊಂದಾಯಿಸಿ ಸಂಬಂಧಿಸಿದ ಅಧಿಕಾರಿಗಳಿಂದ ಪರಿಹಾರ ಕಂಡುಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸ್ಥಳೀಯ ಗ್ರಾಮಲೆಕ್ಕಾಧಿಕಾರಿ ಅಥವಾ ಗ್ರಾಮ ಪಂಚಾಯತಿ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಳ್ಳಬಹುದಾಗಿದೆ. ಈ ಕುರಿತು ತಹಸೀಲ್ದಾರ ಸಾರಿಕಾ ಲಿಂಗನಮಕ್ಕಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಂದು ಅಮರಾಪುರ ಗ್ರಾಮದಲ್ಲಿ 'ಪ್ರಜಾಸೇವಾ ಆಂದೋಲನ' ಸಭೆ

ಪಾಂಡವ ನ್ಯೂಸ್, ಬಳ್ಳಾರಿ : ರಾಜ್ಯ ಸರ್ಕಾರದ ಸುತ್ತೋಲೆಯನ್ವಯ ರಾಜ್ಯಾದ್ಯಂತ ಹಮ್ಮಿಕೊಳ್ಳಲಾಗಿರುವ 'ಪ್ರಜಾಸೇವಾ ಅಭಿಯಾನ'ದ ಅಂಗವಾಗಿ, ಬಳ್ಳಾರಿ ತಾಲೂಕಿನ ರೂಪನಗುಡಿ ಹೋಬಳಿಯ ಅಮರಾಪುರ ಗ್ರಾಮ ಪಂಚಾಯಿತಿ ಆವರಣದಲ್ಲಿ ನವೆಂಬರ್ 7 ರಂದು ಬೆಳಗ್ಗೆ 10 ಗಂಟೆಗೆ 'ಪ್ರಜಾಸೇವಾ ಆಂದೋಲನ' ಸಭೆಯನ್ನು ಆಯೋಜಿಸಲಾಗಿದೆ.ಬಳ್ಳಾರಿ ಗ್ರಾಮೀಣ ಹಾಗೂ ನಗರ ಶಾಸಕರ ಉಪಸ್ಥಿತಿಯಲ್ಲಿ ಈ ಕಾರ್ಯಕ್ರಮ ನಡೆಯಲಿದೆ. ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ ಪರಿಹರಿಸುವ ಉದ್ದೇಶದಿಂದ ಈ ಸಭೆ ನಡೆಯಲಿದ್ದು, ಬಳ್ಳಾರಿ ತಾಲೂಕಿನ ಸಾರ್ವಜನಿಕರು ಈ ಸದಾವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಬಳ್ಳಾರಿ ತಾಲೂಕು ತಹಸೀಲ್ದಾರರು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

ಯುವಕ ನಾಪತ್ತೆ– ಪತ್ತೆಗೆ ಮನವಿ

ಪಾಂಡವ ನ್ಯೂಸ್, ಬಳ್ಳಾರಿ : ನಗರದ ಪಂಜಾ ಮಕಾನ್ ಹತ್ತಿರದ, ಗೌಳೇರಹಟ್ಟಿ ಬಸ್ ನಿಲ್ದಾಣದ ಎದುರು ನಿವಾಸಿಯಾದ ಜಿಲಾನ್ ಬಾಷ (23) ಎಂಬ ಯುವಕ ಕಾಣೆಯಾಗಿದ್ದು, ಈ ಕುರಿತು ಎಪಿಎಂಸಿ ಯಾರ್ಡ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗಾಗಿ ಸಾರ್ವಜನಿಕರು ಸಹಕರಿಸಬೇಕು ಎಂದು ಠಾಣಾಧಿಕಾರಿ ಮನವಿ ಮಾಡಿದ್ದಾರೆ. ಅಕ್ಟೋಬರ್ 30ರಂದು ಮಧ್ಯಾಹ್ನ ಹೊರಗೆ ಹೋಗಿ ಬರುವುದಾಗಿ ಹೇಳಿ ಹೋದವರು ಮನೆಗೆ ಮರಳದೆ ನಾಪತ್ತೆಯಾಗಿದ್ದಾರೆ.ಚಹರೆ ವಿವರ: ಅಂದಾಜು 5 ಅಡಿ 6 ಇಂಚು ಎತ್ತರ, ಗೋಧಿ ಮೈಬಣ್ಣ, ದುಂಡು ಮುಖ, ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ, ಹಿಂದಿ ಹಾಗೂ ಸ್ವಲ್ಪ ತೆಲುಗು ಮಾತನಾಡುತ್ತಾರೆ. ಕಾಣೆಯಾದ ಸಂದರ್ಭದಲ್ಲಿ ನೀಲಿ ಬಣ್ಣದ ತುಂಬು ತೋಳಿನ ಅಂಗಿ ಮತ್ತು ಹಳದಿ ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಬಲಗಣ್ಣಿನ ಮೇಲೆ ಹಳೆಯ ಗಾಯದ ಗುರುತಿದೆ.ಯುವಕನ ಬಗ್ಗೆ ಯಾವುದೇ ಮಾಹಿತಿ ಲಭಿಸಿದಲ್ಲಿ ಸಾರ್ವಜನಿಕರು ತಕ್ಷಣವೇ ಎಪಿಎಂಸಿ ಯಾರ್ಡ್ ಪೊಲೀಸ್ ಠಾಣೆ, ಬಳ್ಳಾರಿ: 08392–250033, ಪೊಲೀಸ್ ಕಂಟ್ರೋಲ್ ರೂಂ, ಬಳ್ಳಾರಿ: 08392–258100 ಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸರ್ವಜ್ಞ ಭವನಕ್ಕೆ ಐದು ಕೋಟಿ ರೂ. ಅನುದಾನಕ್ಕೆ ಮನವಿ

ಸುಸಜ್ಜಿತ ಭವನ ನಿರ್ಮಾಣಕ್ಕೆ ಆದ್ಯತೆ: ಸಚಿವ ರುದ್ರಪ್ಪ ಲಮಾಣಿ



ಪಾಂಡವ ನ್ಯೂಸ್, ಹಾವೇರಿ : ನಗರದ ಇಜಾರಿ ಲಕಮಾಪುರದ ಲಿಂಗದಹಳ್ಳಿ ಲೇಔಟ್ ಪಕ್ಕದಲ್ಲಿ ಜಿಲ್ಲಾ ಕುಂಬಾರ ಸಮಾಜದ ವತಿಯಿಂದ ನಿರ್ಮಿಸಲುದ್ದೇಶಿಸಿರುವ ಸರ್ವಜ್ಞ ಸಮುದಾಯ ಭವನಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ರುದ್ರಪ್ಪ ಲಮಾಣಿ ಶಂಕುಸ್ಥಾಪನೆ ನೆರವೇರಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಸಮಾಜದ ಮುಖಂಡರು, ಭವನ ನಿರ್ಮಾಣಕ್ಕೆ ಐದು ಕೋಟಿ ರೂ. ಅನುದಾನ ಒದಗಿಸುವಂತೆ ಸಚಿವರಿಗೆ ಮನವಿ ಮಾಡಿದರು.

ಮನವಿಗೆ ಸ್ಪಂದಿಸಿದ ಸಚಿವರು, ಸಮಾಜದ ಬಹುದಿನಗಳ ಬೇಡಿಕೆಯಾಗಿರುವ ಸಮುದಾಯ ಭವನವನ್ನು ಸುಸಜ್ಜಿತವಾಗಿ ನಿರ್ಮಿಸಲು ಆದ್ಯತೆ ನೀಡಲಾಗುವುದು. ಇದಕ್ಕೆ ಅಗತ್ಯವಿರುವ ಅನುದಾನದ ಪ್ರಮಾಣವನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಕೆಸಿಸಿ ಬ್ಯಾಂಕ್ ನಿರ್ದೇಶಕ ಕೊಟ್ರೇಶಪ್ಪ ಬಸೇಗಣ್ಣಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಹನುಮಂತಪ್ಪ ಮರಡಿ, ಹಾವೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರಭುಗೌಡ ಬಿಷ್ಟನಗೌಡ್ರ, ಜಿಲ್ಲಾ ಕುಂಬಾರ ಸಮಾಜದ ಗೌರವಾಧ್ಯಕ್ಷ ಶಿವಣ್ಣ ಚಕ್ರಸಾಲಿ, ಜಿಲ್ಲಾಧ್ಯಕ್ಷ ರೇವಣಪ್ಪ ಚಕ್ರಸಾಲಿ, ಕಾರ್ಯದರ್ಶಿ ಭರಮಪ್ಪ ಚಕ್ರಸಾಲಿ, ನಿಂಗರಾಜ ಕುಂಬಾರ, ಕೆ. ಬಸವರಾಜಪ್ಪ, ಸುರೇಶ ಕುಂಬಾರ, ಬಿ.ಬಿ. ಚಕ್ರಸಾಲಿ, ಎಂ.ಪಿ. ಕುಂಬಾರ, ಸೋಮಲಿಂಗಪ್ಪ ಕುಂಬಾರ, ಶಿವಾನಂದ ಚಕ್ರಸಾಲಿ, ನಿಂಗಪ್ಪ ಕುಂಬಾರ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.

ಚನ್ನವೀರಪ್ಪ ಚಕ್ರಸಾಲಿ ಕಾರ್ಯಕ್ರಮ ನಿರ್ವಹಿಸಿದರು.

ನವೆಂಬರ್‌ನಲ್ಲಿ ಜಿಲ್ಲೆಯಾದ್ಯಂತ 'ಪ್ರಜಾಸೇವೆ ಆಂದೋಲನ : ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ

ಪಾಂಡವ ನ್ಯೂಸ್, ಬಳ್ಳಾರಿ : ರಾಜ್ಯ ಸರ್ಕಾರದ ಪ್ರಜಾಸೇವಾ ಇಲಾಖೆಯ ನಿರ್ದೇಶನದಂತೆ ಬಳ್ಳಾರಿ ಜಿಲ್ಲೆಯಾದ್ಯಂತ ಸಾರ್ವಜನಿಕರ ಅಹವಾಲುಗಳನ್ನು ಆಲಿಸಿ ಸ್ಥಳದಲ್ಲೇ ಪರಿಹಾರ ಒದಗಿಸಲು ನವೆಂಬರ್ ಮಾಹೆಯ ಪ್ರತಿ ಶನಿವಾರದಂದು 'ಪ್ರಜಾಸೇವೆ ಆಂದೋಲನ' ಸಭೆಗಳನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ತಿಳಿಸಿದ್ದಾರೆ.

ಈ ಸಭೆಗಳು ಸ್ಥಳೀಯ ಶಾಸಕರ ನೇತೃತ್ವದಲ್ಲಿ ಪ್ರತಿ ಶನಿವಾರ ಬೆಳಿಗ್ಗೆ 11 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ನಡೆಯಲಿವೆ. ಸಾರ್ವಜನಿಕರು ತಮ್ಮ ಕುಂದುಕೊರತೆಗಳು ಹಾಗೂ ಸರ್ಕಾರದ ವಿವಿಧ ಯೋಜನೆಗಳ ಸವಲತ್ತುಗಳನ್ನು ಪಡೆಯಲು ನಿಗದಿತ ನಮೂನೆಗಳಲ್ಲಿ ಅರ್ಜಿ ಸಲ್ಲಿಸಿ ಪರಿಹಾರ ಪಡೆದುಕೊಳ್ಳುವಂತೆ ಕೋರಿದ್ದಾರೆ.

ತಾಲ್ಲೂಕುವಾರು ಸಭೆಗಳ ವೇಳಾಪಟ್ಟಿ:

ಬಳ್ಳಾರಿ ತಾಲ್ಲೂಕು : ನವೆಂಬರ್ 7 (1ನೇ ಶನಿವಾರ): ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರ ನೇತೃತ್ವದಲ್ಲಿ ಬಂಡಿಮೋಟ್ ನಲ್ಲಿ ನಡೆಯಲಿದೆ.



ನವೆಂಬರ್ 14 (2ನೇ ಶನಿವಾರ): ಬಳ್ಳಾರಿ ಗ್ರಾಮೀಣ ಶಾಸಕ ಬಿ. ನಾಗೇಂದ್ರ ಅವರ ನೇತೃತ್ವದಲ್ಲಿ ರೂಪನಗುಡಿ ಹೋಬಳಿಯ ಅಸುಂಡಿ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲಾ ಆವರಣದಲ್ಲಿ ಆಯೋಜಿಸಲಾಗಿದೆ.

ನವೆಂಬರ್ 21 (3ನೇ ಶನಿವಾರ): ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರ ನೇತೃತ್ವದಲ್ಲಿ ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಸಭೆ ನಡೆಯಲಿದೆ.

ನವೆಂಬರ್ 28 (4ನೇ ಶನಿವಾರ): ಬಳ್ಳಾರಿ ಗ್ರಾಮೀಣ ಶಾಸಕ ಬಿ. ನಾಗೇಂದ್ರ ಅವರ ನೇತೃತ್ವದಲ್ಲಿ ಮೋಕಾ ಹೋಬಳಿಯ ಗೋನಾಳ್ ಗ್ರಾಮ ಪಂಚಾಯಿತಿ ಆವರಣದಲ್ಲಿ ಜರುಗಲಿದೆ. ಸಿರುಗುಪ್ಪ ತಾಲ್ಲೂಕು : (ಎಲ್ಲಾ ಸಭೆಗಳು ಶಾಸಕ ಬಿ.ಎಂ. ನಾಗರಾಜ ಅವರ ನೇತೃತ್ವದಲ್ಲಿ ನಡೆಯಲಿವೆ) ನವೆಂಬರ್ 7: ಸಿರುಗುಪ್ಪ ಹೋಬಳಿಯ ಕುಡುದರಹಾಳು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ. ನವೆಂಬರ್ 14: ಹಚ್ಚೋಳ್ಳಿ ಹೋಬಳಿಯ ಬೀರಳ್ಳಿ ಗ್ರಾಮದ ಸಮುದಾಯ ಭವನ. ನವೆಂಬರ್ 21: ಕರೂರು ಹೋಬಳಿಯ ಬಲಕುಂದಿ ಗ್ರಾಮ ಪಂಚಾಯಿತಿ ಕಾರ್ಯಾಲಯ. ನವೆಂಬರ್ 28: ತೆಕ್ಕಲಕೋಟೆ ಹೋಬಳಿಯ ಮಣ್ಣೂರು ಸೂಗೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ. ಸಂಡೂರು ತಾಲ್ಲೂಕು:(ಎಲ್ಲಾ ಸಭೆಗಳು ಶಾಸಕಿ ಅನ್ನಪೂರ್ಣ ತುಕಾರಾಂ ಅವರ ನೇತೃತ್ವದಲ್ಲಿ ನಡೆಯಲಿವೆ) ನವೆಂಬರ್ 7: ನಿಡಗುರ್ತಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ. ನವೆಂಬರ್ 14: ಭುಜಂಗ ನಗರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ. ನವೆಂಬರ್ 21: ಸಂಡೂರು ತಾಲ್ಲೂಕು ಕಚೇರಿ ಸಭಾಂಗಣ.

ನವೆಂಬರ್ 28: ರಾಜಾಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ.

ಕಂಪ್ಲಿ ಹಾಗೂ ಕುರುಗೋಡು ತಾಲ್ಲೂಕು: (ಎಲ್ಲಾ ಸಭೆಗಳು ಕಂಪ್ಲಿ ಶಾಸಕ ಜೆ.ಎನ್. ಗಣೇಶ್ ಅವರ ನೇತೃತ್ವದಲ್ಲಿ ನಡೆಯಲಿವೆ)

ನವೆಂಬರ್ 7 (ಕುರುಗೋಡು): ಕೋಳೂರು ಹೋಬಳಿಯ ಸೋಮಸಮುದ್ರ ಗ್ರಾಮ ಪಂಚಾಯಿತಿ ಕಾರ್ಯಾಲಯ. ನವೆಂಬರ್ 14 (ಕಂಪ್ಲಿ): ದೇವಸಮುದ್ರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ. ನವೆಂಬರ್ 21 (ಕುರುಗೋಡು): ಕುರುಗೋಡು ಹೋಬಳಿಯ ಗಣಿಕೆಹಾಳು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣ.

ನವೆಂಬರ್ 28 (ಕಂಪ್ಲಿ): ದೇವಲಾಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ.

ಜಿಲ್ಲೆಯ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳುವಂತೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

25 ವರ್ಷಗಳ ಕನ್ನಡ ಕೈಂಕರ್ಯಕ್ಕೆ ಶಕುಂತಲಾ ಹೂಗಾರಗೆ ರಾಜ್ಯೋತ್ಸವದ ಗರಿ

ಪಾಂಡವ ನ್ಯೂಸ್, ಹುಬ್ಬಳ್ಳಿ: ಕನ್ನಡ ಭಾಷಾ ಬೋಧನೆಯಲ್ಲಿ 25 ವರ್ಷಗಳ ಸೇವೆ ಸಲ್ಲಿಸಿರುವ ಲ್ಯಾಮಿಂಗ್ಟನ್ ಪ್ರೌಢಶಾಲೆಯ ಶಿಕ್ಷಕಿ ಶಕುಂತಲಾ ಶಾಂತಪ್ಪ ಹೂಗಾರ ಅವರಿಗೆ ವಿಶ್ವ ಕನ್ನಡ ಬಳಗದ ವತಿಯಿಂದ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ವಿಶ್ವ ಕನ್ನಡ ಬಳಗ ಆಯೋಜಿಸಿದ್ದ ಸಮಾರಂಭದಲ್ಲಿ ಮಾಜಿ ಮುಖ್ಯಮಂತ್ರಿ, ಸಂಸದ ಜಗದೀಶ ಶೆಟ್ಟರ್ ಪ್ರಶಸ್ತಿ ಪ್ರದಾನ ಮಾಡಿದರು.

ರೋಟರಿ ಮಾಧ್ಯಮಿಕ ಶಾಲೆಯಲ್ಲಿ ಶಿಕ್ಷಕಿಯಾಗಿ ವೃತ್ತಿ ಆರಂಭಿಸಿದ ಶಕುಂತಲಾ ಅವರು, ಬಳಿಕ ಲ್ಯಾಮಿಂಗ್ಟನ್ ಪ್ರೌಢಶಾಲೆಯಲ್ಲಿ ಕನ್ನಡ ಶಿಕ್ಷಕಿಯಾಗಿ ಸೇವೆ ಮುಂದುವರಿಸಿದ್ದಾರೆ. ಬೋಧನಾ ವೃತ್ತಿಯ ಜತೆಗೆ ಕನ್ನಡ ಸಾಹಿತ್ಯ, ಸಾಮಾಜಿಕ, ಸಾಂಸ್ಕೃತಿಕ ಹಾಗೂ ಧಾರ್ಮಿಕ ಚಟುವಟಿಕೆಗಳಲ್ಲೂ ಸಕ್ರಿಯರಾಗಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿ ಚನ್ನಮ್ಮ ಪರಿಸರ ಸೇವಾ ಸಮಿತಿ, ಬಸವ ಪರಿಸರ ಸಂರಕ್ಷಣಾ ಸಮಿತಿ ಹಾಗೂ ಕರ್ನಾಟಕ ವಿದ್ಯಾವರ್ಧಕ ಸಂಘದ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಸೇವೆ ಸಲ್ಲಿಸುತ್ತಿದ್ದಾರೆ.

ಸಮಾರಂಭದಲ್ಲಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ ಸಾವಕಾರ, ಧಾರವಾಡ ಬಸವ ಕೇಂದ್ರದ ಅಧ್ಯಕ್ಷ ಸಿದ್ದರಾಮಣ್ಣ ನಡಕಟ್ಟಿ, ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ಸವಿತಾ ನಡಕಟ್ಟಿ, ವಿಶ್ವ ಕನ್ನಡ ಬಳಗದ ಅಧ್ಯಕ್ಷ ಸದಾಶಿವ ಚೌಶೆಟ್ಟಿ, ಡಾ. ಸುರೇಶ ಡಿ. ಹೊರಕೇರಿ, ಶಾಂತಪ್ಪ ವಿ. ಹೂಗಾರ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.



ಉಚಿತ 'ಕೃಷಿ ಉದ್ಯಮಿ' ತರಬೇತಿಗೆ ಚಾ

DAY -NRLM ಯೋಜನೆಯಡಿ ರಾಜ್ಯ ಮಟ್ಟದ ಕೌಶಲ್ಯ ಕರ್ನಾಟಕ ಪ್ರಶಸ್ತಿಗೆ ಆಯ್ಕೆಯಾದ ಗದಗ ಜಿಲ್ಲೆಯ ಪ್ರಕೃತಿ ಸ್ವ–ಸಹಾಯ ಸಂಘ

ಪಾಂಡವ ನ್ಯೂಸ್, ಗದಗ: ಮೀನು ಸಾಕಾಣಿಕೆಯಲ್ಲಿ ತೊಡಗಿಕೊಂಡು ಸ್ವಾವಲಂಬನೆ ಹಾದಿಯಲ್ಲಿರುವ ತಾಲೂಕಿನ ಹಾತಲಗೇರಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಪ್ರಕೃತಿ ಮಹಿಳಾ ಸ್ವ–ಸಹಾಯ ಸಂಘವು 2026ನೇ ಸಾಲಿನ ಕೌಶಲ್ಯ ಕರ್ನಾಟಕ ಪ್ರಶಸ್ತಿಗೆ ಆಯ್ಕೆಯಾಗಿರುವುದು ಸ್ವ–ಸಹಾಯ ಸಂಘದ ವಲಯದಲ್ಲಿ ಸಂತಸ ಮೂಡಿಸಿದೆ. ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ರಾಜ್ಯದ ಒಟ್ಟು 8 ಸ್ವ–ಸಹಾಯ ಗುಂಪುಗಳನ್ನು ಆಯ್ಕೆ ಮಾಡಲಾಗಿದ್ದು, ಈ ಪೈಕಿ ಪ್ರಕೃತಿ ಸ್ವ ಸಹಾಯ ಸಂಘವನ್ನೂ ಸಹ ಆಯ್ಕೆ ಮಾಡಲಾಗಿದೆ. ಇದೇ ತಿಂಗಳು 5 ರಂದು ಬೆಂಗಳೂರಿನ ಹೊಟೆಲ್ ಲಲಿತ್ ಅಶೋಕನಲ್ಲಿ ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ಜರುಗುವ 'ಬೆಂಗಳೂರು ಕೌಶಲ್ಯ ಸಮ್ಮಿತ್' ಕಾರ್ಯಕ್ರಮದಲ್ಲಿ ಕೌಶಲ್ಯ ಕರ್ನಾಟಕ ಪ್ರಶಸ್ತಿ ಪ್ರಶಸ್ತಿ ನೀಡಲಾಗುತ್ತಿದೆ. ಜೀವನೋಪಾಯಕ್ಕಾಗಿ ಕೇವಲ ಕೃಷಿ ಮತ್ತು ಕೂಲಿ ಕೆಲಸಗಳಿಗೆ ಮಾತ್ರ ಸೀಮಿತಗೊಳ್ಳದೇ, ಸ್ಥಳೀಯ ಸಂಪನ್ಮೂಲಗಳನ್ನು ಸಮರ್ಪಕವಾಗಿ ಬಳಸಿಕೊಂಡಲ್ಲಿ ಹೊಸ ಉದ್ಯೋಗಾವಕಾಶಗಳನ್ನೂ ಸಹ ರೂಪಿಸಬಹುದು ಎಂಬುದಕ್ಕೆ ಗದಗ ತಾಲೂಕಿನ ಸಂಬಾಪುರ ಗ್ರಾಮದ ಪ್ರಕೃತಿ ಸ್ವಸಹಾಯ ಸಂಘದ ಮಹಿಳೆಯರು ಉತ್ತಮ ಉದಾಹರಣೆಯಾಗಿದ್ದಾರೆ.



ಸಣ್ಣ ಕೆರೆಯೊಂದರಲ್ಲಿ ಮೀನು ಸಾಕಾಣಿಕೆ ಕೈಗೊಂಡು ಆದಾಯೋತ್ಪನ್ನ ಚಟುವಟಿಕೆಯಲ್ಲಿ ತೊಡಗಿಕೊಳ್ಳುವ ಮೂಲಕ ಇತರೇ ಮಹಿಳೆಯರಿಗೆ ಮಾದರಿಯಾಗಿದ್ದಾರೆ.

ರೈತ ಮಹಿಳೆಯರಿಗೆ ವರದಾನವಾದ ಮತ್ಸ್ಯ ಸಂಜೀವಿನಿ: ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆಯಡಿ ಬರುವ ಸಂಜೀವಿನಿ DAY-NRLM ಯೋಜನೆಯಡಿ 'ಮತ್ಸ್ಯ ಸಂಜೀವಿನಿ' ಎಂಬ ವಿನೂತನ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದೆ. ಈ ಕಾರ್ಯಕ್ರಮದಡಿ ಗ್ರಾಮ ಪಂಚಾಯ ವ್ಯಾಪ್ತಿಗೆ ಬರುವ ಕೆರೆಗಳನ್ನು ಗುರುತಿಸಿ, ಸ್ಥಳೀಯ ಪಂಚಾಯತಿಯೊಂದಿಗೆ ಒಂದು ವರ್ಷದ ಅವಧಿಗೆ ಒಪ್ಪಂದ ಮಾಡಿಕೊಂಡು ಮೀನು ಸಾಕಾಣಿಕೆಗೆ ಅವಕಾಶ ಕಲ್ಪಿಸಲಾಗಿದೆ. ಈಗಾಗಲೇ ತಾಲೂಕಿನ 4 ಕೆರೆಗಳಲ್ಲಿ ಸ್ವ–ಸಹಾಯ ಗುಂಪಿನ ಮಹಿಳೆಯರಿಗೆ ಮೀನುಗಾರಿಕೆಯಲ್ಲಿ ತೊಡಗಿಕೊಳ್ಳಲು ಅವಕಾಶ ನೀಡಲಾಗಿದೆ. ಮೀನುಗಾರಿಕೆ ಇಲಾಖೆಯ ಸಹಕಾರದೊಂದಿಗೆ ಕಳೆದ ವರ್ಷ ಹನ್ನೆರಡು ಸಾವಿರ ಮೀನು ಮರಿಗಳನ್ನು ಸಂಬಾಪುರ ಕೆರೆಗೆ ಬಿಡಲಾಗಿತ್ತು. ಈಗಾಗಲೇ ಎರಡು ಬಾರಿ ಮೀನು ಕಟಾವು ಮಾಡಲಾಗಿದ್ದು, ಪ್ರಕೃತಿ ಸ್ವ–ಸಹಾಯ ಸಂಘದ ಮಹಿಳೆಯರು ಸ್ಥಳೀಯವಾಗಿ ಮೀನುಗಳನ್ನು ಮಾರಾಟ ಮಾಡುತ್ತಿದ್ದಾರೆ. ಇದುವರೆಗೆ ಐವತ್ತು ಸಾವಿರಕ್ಕೂ ಹೆಚ್ಚು ಆದಾಯ ಪಡೆಯುವಲ್ಲಿ ಯಶಸ್ವಿಯಾಗಿದ್ದು, ಇನ್ನೂ ಒಂದು ಸುತ್ತಿನ ಮೀನು ಕಟಾವು ಬಾಕಿಯಿದೆ. ಹೀಗಾಗಿ ಇನ್ನೂ ಹೆಚ್ಚಿನ ಆದಾಯದ ನಿರೀಕ್ಷೆಯಲ್ಲಿದ್ದಾರೆ.ಸ್ವ–ಉದ್ಯೋಗದ ಅನ್ವೇಷಣೆಯಲ್ಲಿದ್ದ ಮಹಿಳೆರಿಗೆ ಸಿಕ್ಕ ಅವಕಾಶ: ಗದಗ ತಾಲೂಕಿನ ಸಂಬಾಪುರ ಗ್ರಾಮದ ಪ್ರಕೃತಿ ಸ್ವಸಹಾಯ ಸಂಘದ ಐವರು ಮಹಿಳಾ ಸದಸ್ಯರು ಸ್ವ–ಉದ್ಯೋಗಲ್ಲಿ ತೊಡಗಿಕೊಂಡು ಕುಟುಂಬಕ್ಕೆ ಆಧಾರವಾಗಬೇಕೆಂಬ ಹಂಬಲದಲ್ಲಿದ್ದರು. ಇದೇ ವೇಳೆಗೆ ಮತ್ಸ್ಯ ಸಂಜೀವಿನಿ ಯೋಜನೆಯಡಿ ಮೀನು ಸಾಕಾಣಿಕೆಗೆ ಇರುವ ಅಕವಾಶಗಳ ಬಗ್ಗೆ ತಿಳಿದುಕೊಳ್ಳುತ್ತಾರೆ. ಈ ಸಂಬಂಧ ಗದಗ ತಾಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿಯ ಅಧಿಕಾರಿಗಳ ಮಾರ್ಗದರ್ಶನ ಪಡೆದು, ಸ್ಥಳೀಯವಾಗಿ ಲಭ್ಯವಿರುವ ಕೆರೆಯನ್ನು ಬಳಸಿಕೊಂಡು ಮೀನು ಸಾಕಾಣಿಕೆಗೆ ಯೋಜನೆ ರೂಪಿಸಿ ಅನುಷ್ಠಾನಗೊಳಿಸುವಲ್ಲಿ ಯಶಸ್ವಿಯಾಗಿದ್ದಾರೆ.ಮೀನು ಸಾಕಾಣಿಕೆಯ ಬಗ್ಗೆ ವೈಜ್ಞಾನಿಕ ಮತ್ತು ತಾಂತ್ರಿಕ ಜ್ಞಾನ ಪಡೆಯುವ ಉದ್ದೇಶದಿಂದ ಜಿಲ್ಲಾ ಪಂಚಾಯಿತಿ ಹಾಗೂ ಮೀನುಗಾರಿಕೆ ಇಲಾಖೆಯ ಸಮನ್ವಯದಲ್ಲಿ ಜಿಲ್ಲಾ ಸಂಪನ್ಮೂಲ ಕೇಂದ್ರದಲ್ಲಿ ನಡೆದ ಮೂರು ದಿನಗಳ ವಸತಿ ಸಹಿತ ತರಬೇತಿಯಲ್ಲಿ ಮೀನು ಸಾಕಾಣಿಕೆಯ ವಿಧಾನಗಳು, ಮೀನು ಮರಿಗಳ ನಿರ್ವಹಣೆ, ಆಹಾರ ಪೂರೈಕೆ, ಬೆಳವಣಿಗೆಯ ಮೇಲ್ವಿಚಾರಣೆ ಹಾಗೂ ಉತ್ಪಾದನೆಗೆ ಸಂಬಂಧಿಸಿದ ಅಗತ್ಯ ತಾಂತ್ರಿಕ ಮಾಹಿತಿಯನ್ನು ನೀಡಲಾಗಿದೆ.

ಮೀನುಗಾರಿಕೆ ಇಲಾಖೆಯಿಂದ ಸಿಕ್ಕ ಬೆಂಬಲ: ಮೀನು ಸಾಕಾಣಿಕೆ ಚಟುವಟಿಕೆಗೆ ಅಗತ್ಯವಾದ ಮೀನು ಮರಿಗಳನ್ನು ಪಡೆಯಲು 2025ರಲ್ಲಿ ಪ್ರಕೃತಿ ಸ್ವಸಹಾಯ ಸಂಘದ ಸದಸ್ಯರು ಮೀನುಗಾರಿಕೆ ಇಲಾಖೆಯಿಂದ ಮೀನು ಮರಿಗಳ ನರ್ಸರಿಯಿಂದ ಕಾಟ್ಲಾ (Catla -6000) ಮತ್ತು ರೋಹು (Rohu -6000) ತಳಿಯ ಹನ್ನೆರಡು ಸಾವಿರ ಮೀನು ಮರಿಗಳನ್ನು ನೀಡಲಾಯಿತು. ಇವುಗಳನ್ನು ಸಂಬಾಪುರ ಕೆರೆಯಲ್ಲಿ ಬಿಡುವ ಮೂಲಕ ಮೀನುಗಾರಿಕೆಗೆ ಚಾಲನೆ ನೀಡಲಾಯಿತು. ಮೀನುಗಳ ಬೆಳವಣಿಗೆಗೆ ಅಗತ್ಯವಾದ ಆಹಾರ ಪೂರೈಕೆ, ಕೆರೆಯ ನಿರ್ವಹಣೆ ಹಾಗೂ ನಿರಂತರ ಮೇಲ್ವಿಚಾರಣೆಯನ್ನು ಸಂಘದ ಐವರು ಸದಸ್ಯರು ಸಾಮೂಹಿಕವಾಗಿ ನಿರ್ವಹಿಸಿದ್ದರ ಫಲವಾಗಿ ಇಂದು ಸಂಘದ ಸದಸ್ಯರ ಆದಾಯೋತ್ಪನ್ನಕ್ಕೆ ಅನುಕೂಲವಾಗಿದೆ.2028ರವರೆಗೆ ಕೆರೆ ಗುತ್ತಿಗೆ ಮುಂದುವರಿಸಲು ಸಂಕಲ್ಪ: ಆರಂಭಿಕ ಹಂತದಲ್ಲಿಯೇ ದೊರೆತ ಯಶಸ್ಸಿನಿಂದ ಪ್ರೇರಿತರಾಗಿರುವ ಪ್ರಕೃತಿ ಸ್ವ ಸಹಾಯ ಸಂಘದ ಸದಸ್ಯರು ಮೀನು ಸಾಕಾಣಿಕೆಯನ್ನು

ತಾತ್ಕಾಲಿಕ ಚಟುವಟಿಕೆಯಾಗಿ ನೋಡದೆ, ನಿರಂತರ ಜೀವನೋಪಾಯ ಉದ್ಯಮವನ್ನಾಗಿ ಅಭಿವೃದ್ಧಿಪಡಿಸಲು ಮುಂದಾಗಿದ್ದಾರೆ. ಹೀಗಾಗಿ ಕೆರೆಯ ಗುತ್ತಿಗೆಯನ್ನು 2028ರವರೆಗೆ ಮುಂದುವರಿಸುವ ನಿರ್ಣಯ ಕೈಗೊಂಡಿದ್ದಾರೆ.

ಇತರ ಮಹಿಳೆಯರಿಗೂ ಪ್ರೇರಣೆಯಾದ ಸಾಮೂಹಿಕ ಉದ್ಯಮ: ಸಾಮಾನ್ಯವಾಗಿ ಗ್ರಾಮೀಣ ಕೆರೆಗಳನ್ನು ನೀರಿನ ಸಂಗ್ರಹಣೆಯ ಮೂಲವಾಗಿ ಮಾತ್ರ ಪರಿಗಣಿಸುವ ಸಂದರ್ಭದಲ್ಲಿ, ಅದೇ ಕೆರೆಯನ್ನು ಜೀವನೋಪಾಯದ ಸಂಪನ್ಮೂಲವನ್ನಾಗಿ ಪರಿವರ್ತಿಸಿರುವುದು ಈ ಕಾರ್ಯಕ್ರಮದ ವಿಶೇಷತೆ. ಸರ್ಕಾರಿ ಯೋಜನೆಯ ನೆರವು, ಇಲಾಖೆಗಳ ಸಮನ್ವಯತೆ, ತಾಂತ್ರಿಕ ತರಬೇತಿ ಹಾಗೂ ಮಹಿಳೆಯರ ಸಾಮೂಹಿಕ ಪರಿಶ್ರಮ ಒಂದಾದಾಗ ಗ್ರಾಮೀಣ ಮಟ್ಟದಲ್ಲಿಯೇ ಸುಸ್ಥಿರ ಆದಾಯದ ಉದ್ಯಮಗಳನ್ನು ರೂಪಿಸಬಹುದು ಎಂಬುದಕ್ಕೆ ಈ ಪ್ರಯತ್ನ ಸಾಕ್ಷಿಯಾಗಿದೆ.

> "ಸಂಜೀವಿನಿ ಯೋಜನೆ ಹಾಗೂ ಮೀನುಗಾರಿಕೆ ಇಲಾಖೆಯ ಸಹಕಾರದೊಂದಿಗೆ ನಮ್ಮೂರಿನ ಕೆರೆಯಲ್ಲಿ ಮೀನು ಸಾಕಾಣಿಕೆ ಕೈಗೊಂಡೆವು. ಈಗಾಗಲೇ ಎರಡು ಬಾರಿ ಮೀನು ಕಟಾವು ಮಾಡಲಾಗಿದ್ದು, ಐವತ್ತು ಸಾವಿರಕ್ಕೂ ಹೆಚ್ಚು ಆದಾಯ ದೊರೆತಿರುವುದು ನಮ್ಮ ಆತ್ಮವಿಶ್ವಾಸವನ್ನು ಇಮ್ಮಡಿಗೊಳಿಸಿದೆ"
> **–ಶ್ರೀಮತಿ ಶಿವಲೀಲಾ ಹರಿಜನ, ಪ್ರಕೃತಿ ಸ್ವ–ಸಹಾಯ ಸಂಘದ ಸದಸ್ಯೆ**

> "2025ನೇ ಸಾಲಿನಲ್ಲಿ ಮತ್ಸ್ಯ ಸಂಜೀವಿನಿ ಯೋಜನೆಯಡಿ ಮೀನುಗಾರಿಕೆ ಇಲಾಖೆ ಸಹಯೋಗದೊಂದಿಗೆ ಸಂಬಾಪುರ ಕೆರೆಯಲ್ಲಿ ಮೀನು ಸಾಕಾಣಿಕೆ ಮಾಡಲು ಪ್ರಕೃತಿ ಸ್ವ ಸಹಾಯ ಸಂಘದ ಮಹಿಳೆಯರಿಗೆ ಅವಕಾಶ ನೀಡಲಾಗಿತ್ತು. ಮಹಿಳೆಯರ ಪರಿಶ್ರಮವನ್ನು ಪರಿಗಣಿಸಿ ಸರ್ಕಾರ 'ಕೌಶಲ್ಯ ಕರ್ನಾಟಕ ಪ್ರಶಸ್ತಿ' ನೀಡುತ್ತಿರುವುದು ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದೆ"
> **–ಮುಕುಲ್ ಜೈನ್, ಭಾ.ಆ.ಸೇ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ, ಗದಗ**

ವಿವಿಧ ಆರೋಗ್ಯ ಕೇಂದ್ರಗಳಿಗೆ ಡಿಎಚ್ಒ ಹಾಗೂ ಅಧಿಕಾರಿಗಳ ಭೇಟಿ: ಪರಿಶೀಲನೆ



ಪಾಂಡವ ನ್ಯೂಸ್, ಬಳ್ಳಾರಿ : ಜಿಲ್ಲೆಯ ವಿವಿಧ ಪ್ರಾಥಮಿಕ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಹಾಗೂ ವಿವಿಧ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳ ತಂಡ ಇತ್ತೀಚೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಅಲಕಾನಂದ ಡಿ. ಮಳಗಿ ಅವರು ಬಳ್ಳಾರಿ ನಗರ ಪ್ರದೇಶದ ಮಿಲ್ಲರ್ ಪೇಟೆ ಮತ್ತು ಕೌಲ್ ಬಜಾರ್ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿದರು. ಈ ವೇಳೆ ವಾರ್ಡ್‌ಗಳ ಸ್ವಚ್ಛತೆ, ಔಷಧ ದಾಸ್ತಾನು, ನೀರಿನ ಸೌಕರ್ಯ ಹಾಗೂ ಐಇಸಿ ಪರಿಕರಗಳಾದ ಭಿತ್ತಿಪತ್ರ, ಬ್ಯಾನರ್ ಮತ್ತು ಟಿವಿಗಳ ಮೂಲಕ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳು ಪ್ರದರ್ಶನಗೊಂಡಿರುವ ಬಗ್ಗೆ ವೀಕ್ಷಿಸಿದರು.

ಸಾರ್ವಜನಿಕರಿಗೆ ಇಲಾಖೆಯ ಎಲ್ಲಾ ಆರೋಗ್ಯ ಸೇವೆಗಳನ್ನು ಸಮರ್ಪಕವಾಗಿ ಮತ್ತು ಉತ್ತಮ ರೀತಿಯಲ್ಲಿ ತಲುಪಿಸುವಂತೆ ಸಂಬಂಧಪಟ್ಟ ವೈದ್ಯಾಧಿಕಾರಿಗಳಿಗೆ ಸೂಕ್ತ ಸಲಹೆ–ಸೂಚನೆಗಳನ್ನು ನೀಡಿದರು.ಇದೇ ಸಂದರ್ಭದಲ್ಲಿ ಜಿಲ್ಲೆಯ ಇತರ ತಾಲೂಕುಗಳ ಆರೋಗ್ಯ ಕೇಂದ್ರಗಳಿಗೂ ಹಿರಿಯ ಅಧಿಕಾರಿಗಳ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿತು.

ಸಿರುಗುಪ್ಪ ತಾಲೂಕು: ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿ ಡಾ. ಆರ್. ಅಬ್ದುಲ್ಲಾ ಹಾಗೂ ಸಿರುಗುಪ್ಪ ತಾಲೂಕು ಆರೋಗ್ಯ ಅಧಿಕಾರಿ ಡಾ. ಬಸವರಾಜ್ ದಮ್ಮೂರು ಅವರು ಜಂಟಿಯಾಗಿ ಕರೂರು, ತಾಳೂರು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ತೆಕ್ಕಲಕೋಟೆ ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಪ್ರಗತಿ ಪರಿಶೀಲನೆ ನಡೆಸಿದರು. ಚೆಳ್ಳಗುರ್ಕಿ ಕೇಂದ್ರ: ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಮರಿಯಂಬಿ ಎ.ಕೆ. ಮತ್ತು ತಂಡದವರು ಬಳ್ಳಾರಿ ತಾಲೂಕಿನ ಚೆಳ್ಳಗುರ್ಕಿ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ, ವಾರ್ಡ್ ಗಳನ್ನು ಪರಿಶೀಲಿಸಿ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳಲ್ಲಿ ಪ್ರಗತಿ ಸಾಧಿಸಲು ವೈದ್ಯಾಧಿಕಾರಿಗಳಿಗೆ ಸೂಚಿಸಿದರು. ಸಂಡೂರು ತಾಲೂಕು: ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿ ಡಾ. ಇಂದ್ರಾಣಿ ವಿ. ಹಾಗೂ ಸಂಡೂರು ತಾಲೂಕು ಆರೋಗ್ಯ ಅಧಿಕಾರಿ ಡಾ. ಹರೀಶ್ ಅವರು ತೋರಣಗಲ್ಲು ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಸಾರ್ವಜನಿಕ ಸೇವೆಗಳು, ಆಸ್ಪತ್ರೆಯ ಸ್ವಚ್ಛತೆ ಹಾಗೂ ಐಇಸಿ ಪ್ರದರ್ಶನವನ್ನು ಪರಿಶೀಲಿಸಿದರು.

ಶಿಡಿಗಿನಮೊಳ: ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿ ಡಾ. ವೀರೇಂದ್ರ ಕುಮಾರ್ ಮತ್ತು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ. ವೀರಕುಮಾರ್ ರೆಡ್ಡಿ ಅವರು ಜಂಟಿಯಾಗಿ ಶಿಡಿಗಿನಮೊಳ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ, ಸಿಬ್ಬಂದಿಯ ಸಭೆ ನಡೆಸಿ ಸಾರ್ವಜನಿಕರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸಲು ತಿಳಿಸಿದರು.

ಈ ಸಂದರ್ಭದಲ್ಲಿ ಆರೋಗ್ಯ ಸಿಬ್ಬಂದಿ ಹಾಗೂ ಸಾರ್ವಜನಿಕರು ಇದ್ದರು.

ಕುರಿ ಶೆಡ್‌ಗೆ ಬೆಂಕಿ; 150 ಕುರಿ, 100 ಕೋಳಿಗಳು ಸಜೀವ ದಹನ

ಪಾಂಡವ ನ್ಯೂಸ್, ಸೊರಬ: ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಕುರಿ ಶೆಡ್‌ಗೆ ಬೆಂಕಿ ತಗುಲಿ 150 ಕುರಿಗಳು ಹಾಗೂ 100ಕ್ಕೂ ಹೆಚ್ಚು ಕೋಳಿಗಳು ಸಜೀವ ದಹನಗೊಂಡಿರುವ ಘಟನೆ ತಾಲ್ಲೂಕಿನ ಸೂರಣಗಿ ಗ್ರಾಮದಲ್ಲಿ ಮಂಗಳವಾರ ತಡರಾತ್ರಿ ಸಂಭವಿಸಿದೆ.

ಗ್ರಾಮದ ರಾಮಣ್ಣ ಎಂಬುವರಿಗೆ ಸೇರಿದ ಕುರಿ ಶೆಡ್‌ನಲ್ಲಿ ರಾತ್ರಿ ಸುಮಾರು 12 ಗಂಟೆ ವೇಳೆಗೆ ಏಕಾಏಕಿ ಬೆಂಕಿ ಕಾಣಿಸಿಕೊಂಡಿದೆ. ಕ್ಷಣಾರ್ಧದಲ್ಲಿ ಬೆಂಕಿ ಇಡೀ ಶೆಡ್‌ಗೆ ವ್ಯಾಪಿಸಿದ್ದು, ಒಳಗಿದ್ದ ಕುರಿ ಮತ್ತು ಕೋಳಿಗಳು ಬೆಂಕಿಯ ಕೆನ್ನಾಲಿಗೆಗೆ ಸಿಲುಕಿವೆ.



ಶೆಡ್‌ನಲ್ಲಿದ್ದ ಕುರಿಗಳ ಕಿರುಚಾಟ ಕೇಳಿದ ಸ್ಥಳೀಯರು ತಕ್ಷಣ ಅಗ್ನಿಶಾಮಕ ದಳದ ಸಿಬ್ಬಂದಿಗೆ ಮಾಹಿತಿ ನೀಡಿದ್ದಾರೆ. ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ಆಗಮಿಸುವಷ್ಟರಲ್ಲಿ ಬೆಂಕಿ ಇಡೀ ಶೆಡ್‌ನ್ನು ಆವರಿಸಿತ್ತು. ಪರಿಣಾಮ 150 ಕುರಿಗಳು ಹಾಗೂ 100ಕ್ಕೂ ಹೆಚ್ಚು ಕೋಳಿಗಳು ಸುಟ್ಟು ಕರಕಲಾಗಿವೆ. ಪ್ರಾಣಿಗಳನ್ನು ರಕ್ಷಿಸಲು ಸಾಧ್ಯವಾಗದೆ ಸ್ಥಳೀಯರು ಅಸಹಾಯಕತೆಯಿಂದ ನೋಡುವಂತಾಗಿದೆ.

ಘಟನೆಯಿಂದ ಕುರಿ ಸಾಕಾಣಿಕೆಯನ್ನೇ ಜೀವನಾಧಾರವಾಗಿಸಿಕೊಂಡಿದ್ದ ರಾಮಣ್ಣ ಅವರಿಗೆ ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿದೆ. ಬೆಂಕಿ ಅವಘಡದಿಂದ ಕುಟುಂಬಕ್ಕೆ ಆರ್ಥಿಕ ಸಂಕಷ್ಟ ಎದುರಾಗಿದೆ.

ಘಟನಾ ಸ್ಥಳಕ್ಕೆ ಸಂಬಂಧಿಸಿದ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದಲೇ ಬೆಂಕಿ ಅವಘಡ ಸಂಭವಿಸಿರುವ ಶಂಕೆ ವ್ಯಕ್ತವಾಗಿದೆ. ಈ ಕುರಿತು ಆನವಟ್ಟಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

ಸರ್ಕಾರಿ ಐಟಿಐ ಕಾಲೇಜಿನಲ್ಲಿ 'ಜಾಬ್ ಲಿಂಕ್ಡ್ 100 ಐಟಿಸ್' ಹೆಚ್ಚುವರಿ ಕೌಶಲ್ಯ ತರಬೇತಿಗೆ ಚಾಲನೆ



ಪಾಂಡವ ನ್ಯೂಸ್, ಬಳ್ಳಾರಿ : ಕರ್ನಾಟಕ ಸರ್ಕಾರದ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ವತಿಯಿಂದ ಮುಖ್ಯಮಂತ್ರಿಗಳ 100 ದಿನಗಳ ಕಾರ್ಯಕ್ರಮದಡಿ ಹಮ್ಮಿಕೊಳ್ಳಲಾಗಿರುವ 'ಜಾಬ್ ಲಿಂಕ್ಡ್ 100 ಐಟಿಸ್' ಯೋಜನೆಯ ಹೆಚ್ಚುವರಿ ಕೌಶಲ್ಯ ತರಬೇತಿ ಕಾರ್ಯಕ್ರಮದ ಉದ್ಘಾಟನಾ ಸಮಾರಂಭವು ಕುರುಗೋಡು ಪಟ್ಟಣದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಬುಧವಾರ ನಡೆಯಿತು.

ಕಾರ್ಯಕ್ರಮದ ಅಧ್ಯಕ್ಷತೆ ಹಾಗೂ ಉದ್ಘಾಟನೆಯನ್ನು ಸಂಸ್ಥೆಯ ಪ್ರಾಚಾರ್ಯರಾದ ತಿಮ್ಮರಾಜು ವಿ. ಅವರು ನೆರವೇರಿಸಿದರು. ನಂತರ ಮಾತನಾಡಿದ ಅವರು, ಸಂಸ್ಥೆಯಲ್ಲಿ ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಆಧುನಿಕ ಕೈಗಾರಿಕಾ ಕ್ಷೇತ್ರಕ್ಕೆ ಅಗತ್ಯವಿರುವ ಹೆಚ್ಚುವರಿ ಕೌಶಲ್ಯಗಳನ್ನು ನೀಡಿ, ಉದ್ಯೋಗಾವಕಾಶಗಳನ್ನು ಹೆಚ್ಚಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು.

ನವೆಂಬರ್ 02 ರಿಂದ ಏಪ್ರಿಲ್ 27, 2027ರ ವರೆಗೆ ಈ ತರಬೇತಿ ನಡೆಯಲಿದ್ದು, ಪ್ರಾಯೋಗಿಕ ಕಲಿಕೆಗೆ ಹೆಚ್ಚಿನ ಆದ್ಯತೆ ನೀಡಲಾಗುವುದು. ಪ್ರಮುಖ ಕೈಗಾರಿಕೆಗಳೊಂದಿಗೆ ಒಡಂಬಡಿಕೆ ಮಾಡಿಕೊಂಡು ವಿದ್ಯಾರ್ಥಿಗಳಿಗೆ ಅಪ್ರೆಂಟಿಸ್‌ಶಿಪ್ ಹಾಗೂ ನೇರ ಉದ್ಯೋಗ ಸಂಪರ್ಕ ಕಲ್ಪಿಸಲಾಗುವುದು. ಇದರ ಸದುಪಯೋಗವನ್ನು ಪ್ರತಿಯೊಬ್ಬ ವಿದ್ಯಾರ್ಥಿಯೂ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಹಿರಿಯ ಕಿರಿಯ ತರಬೇತಿ ಅಧಿಕಾರಿಗಳಾದ ಸುಭಾಷ್ ಚಂದ್ರ ಗೌಡ ಹೆಚ್., ಸತೀಶ್ ಡಿ. ಜಿ., ಪ್ರಮಿಳಾ ಎಂ. ಹಾಗೂ ಕಚೇರಿ ಪ್ರಥಮ ದರ್ಜೆ ಸಹಾಯಕ ಮಹೇಶ್ ಟಿ. ಸೇರಿದಂತೆ ಸಂಸ್ಥೆಯ ಬೋಧಕ–ಬೋಧಕೇತರ ಸಿಬ್ಬಂದಿ ವರ್ಗ ಹಾಗೂ ನೂರಾರು ವಿದ್ಯಾರ್ಥಿಗಳು ಭಾಗವಹಿ

ಧನ್ವಂತರಿ ಜಯಂತಿಯ ಹಾರ್ದಿಕ ಶುಭಾಶಯಗಳು



ಅಮೃತದ ಕಲಶವ ಹೊತ್ತು ಬಂದ ದೇವರು,
ಆರೋಗ್ಯದ ಬೆಳಕನು ನೀಡಿದ ಗುರುವು,
ಆಯುರ್ವೇದ ಜ್ಞಾನದ ದಾರಿಯ ತೋರಿದವರು,
ಧನ್ವಂತರಿ ದೇವರೇ ನಮ್ಮೆಲ್ಲರ ಪಾಲಕರು.
ಆರೋಗ್ಯವೇ ಸಂಪತ್ತು ಎಂಬುದನು ತಿಳಿಯೋಣ,
ಆಹಾರ ವಿಹಾರದಲ್ಲಿ ಶಿಸ್ತನು ಪಾಲಿಸೋಣ,
ಪ್ರಕೃತಿಯ ಮಡಿಲಲ್ಲಿ ನೆಮ್ಮದಿಯ ಕಾಣೋಣ,
ರೋಗಮುಕ್ತ ಸಮಾಜದ ನಿರ್ಮಾಣ ಮಾಡೋಣ.



ಭಾರತೀಯ ಸಂಸ್ಕೃತಿ, ಪರಂಪರೆ ಮತ್ತು ಆಧ್ಯಾತ್ಮಿಕತೆಯಲ್ಲಿ ಹಬ್ಬಗಳಿಗೆ ವಿಶೇಷವಾದ ಸ್ಥಾನವಿದೆ. ಪ್ರತಿಯೊಂದು ಹಬ್ಬವೂ ಕೇವಲ ಧಾರ್ಮಿಕ ಆಚರಣೆಗೆ ಸೀಮಿತವಾಗಿರದೆ, ಜೀವನಕ್ಕೆ ಒಂದೊಂದು ಉತ್ತಮ ಸಂದೇಶವನ್ನು ನೀಡುತ್ತದೆ. ಅಂತಹ ಮಹತ್ವದ ಹಬ್ಬಗಳಲ್ಲಿ ದೀಪಾವಳಿ ಯು ವಿಶೇಷವಾಗಿರುತ್ತದೆ.ಈ ಹಬ್ಬದಲ್ಲಿ ಧನ್ವಂತರಿ ಜಯಂತಿ ಮತ್ತು ಧನತ್ರಯೋದಶಿಯು ದೀಪಾವಳಿಯ ಮೊದಲ ದಿನದ ಆಚರಣೆ ಆಗಿದೆ. ಈ ಎರಡೂ ಆಚರಣೆಗಳು ಆರೋಗ್ಯ, ಆಯುಷ್ಯ, ಸುಖ, ಸಮೃದ್ಧಿ ಮತ್ತು ಸಾತ್ವಿಕ ಜೀವನದ ಮಹತ್ವವನ್ನು ಸಾರುತ್ತವೆ.

ಧನ್ವಂತರಿ ಜಯಂತಿಯು ಆಯುರ್ವೇದದ ಮಹತ್ವವನ್ನು ಸ್ಮರಿಸುವ ದಿನವಾಗಿದ್ದರೆ, ಧನತ್ರಯೋದಶಿಯು ಆರೋಗ್ಯದ ಜೊತೆಗೆ ಧನ, ಸಂಪತ್ತು ಮತ್ತು ಕುಟುಂಬದ ಕ್ಷೇಮವನ್ನು ಬಯಸುವ ಪವಿತ್ರ ದಿನವಾಗಿದೆ. ಭಾರತೀಯ ಪರಂಪರೆಯಲ್ಲಿ ಆರೋಗ್ಯವೇ ನಿಜವಾದ ಸಂಪತ್ತು ಎಂಬ ಉದಾತ್ತ ವಿಚಾರವನ್ನು ಈ ಹಬ್ಬಗಳು ನಮಗೆ ನೆನಪಿಸುತ್ತವೆ.

ಹಿಂದೂ ಪುರಾಣಗಳ ಪ್ರಕಾರ, ಭಗವಾನ್ ಧನ್ವಂತರಿಯವರು ಶ್ರೀವಿಷ್ಣುವಿನ ಅವತಾರವೆಂದು ಪೂಜಿಸಲ್ಪಡುತ್ತಾರೆ. ಕ್ಷೀರಸಾಗರ ಮಂಥನದ ಸಂದರ್ಭದಲ್ಲಿ ಅಮೃತಕಲಶವನ್ನು ಹಿಡಿದು ಪ್ರತ್ಯಕ್ಷರಾದ ದೇವತೆ ಎಂದು ಪುರಾಣಗಳಲ್ಲಿ ವರ್ಣಿಸಲಾಗಿದೆ. ಇವರು ದೇವತೆಗಳ ವೈದ್ಯರೆಂದೂ, ಆಯುರ್ವೇದದ ಅಧಿದೇವತೆಯೆಂದೂ ಪ್ರಸಿದ್ಧರಾಗಿದ್ದಾರೆ.

ಭಗವಾನ್ ಧನ್ವಂತರಿಯವರ ಕೈಯಲ್ಲಿ ಅಮೃತಕಲಶ, ಶಂಖ, ಚಕ್ರ ಹಾಗೂ ಔಷಧೀಯ ಸಸ್ಯಗಳ ಸಂಕೇತಗಳನ್ನು ಚಿತ್ರಿಸಲಾಗುತ್ತದೆ. ಇವು ಜೀವಶಕ್ತಿ, ರೋಗನಿರೋಧಕ ಸಾಮರ್ಥ್ಯ, ರಕ್ಷಣೆ ಮತ್ತು ಆರೋಗ್ಯದ ಸಂಕೇತಗಳಾಗಿವೆ.

ಧನ್ವಂತರಿಯವರ ಆರಾಧನೆಯು ಕೇವಲ ಧಾರ್ಮಿಕ ನಂಬಿಕೆಯಾಗಿರದೆ, ಮಾನವಕುಲದ ಆರೋಗ್ಯ ಸಂರಕ್ಷಣೆಗೆ ಮೀಸಲಾದ ವೈದ್ಯಕೀಯ ಪರಂಪರೆಯ ಗೌರವದ ಸಂಕೇತವಾಗಿದೆ.

"ಸ್ವಸ್ಥಸ್ಯ ಸ್ವಾಸ್ಥ್ಯ ರಕ್ಷಣಂ, ಆತುರಸ್ಯ ವಿಕಾರ ಪ್ರಶಮನಂ ಚ"

ಅಂದರೆ, ಆರೋಗ್ಯವಂತನ ಆರೋಗ್ಯವನ್ನು ಕಾಪಾಡುವುದು ಮತ್ತು ರೋಗಿಯ ರೋಗವನ್ನು ನಿವಾರಿಸುವುದು ಆಯುರ್ವೇದದ ಪ್ರಧಾನ ಧ್ಯೇಯವಾಗಿದೆ. ಈ ತತ್ವವು ಇಂದಿನ ಆಧುನಿಕ ಜೀವನಶೈಲಿಯಲ್ಲಿಯೂ ಅತ್ಯಂತ ಪ್ರಸ್ತುತವಾಗಿದೆ. ಆಯುರ್ವೇದದ ದೈವವೇ ಭಗವಾನ್ ಧನ್ವಂತರಿಯು"





ಪಂಚಮಹಾಭೂತ ಮತ್ತು ಆರೋಗ್ಯದ ಪರಿಕಲ್ಪನೆಯನ್ನು

ಆಯುರ್ವೇದದಲ್ಲಿ ವಿಶೇಷವಾಗಿ ಮಾನವನ ಆರೋಗ್ಯವನ್ನು ಸಮಗ್ರವಾಗಿ ಪರಿಗಣಿಸಲಾಗುತ್ತದೆ. ದೇಹ, ಮನಸ್ಸು ಮತ್ತು ಆತ್ಮದ ಸಮತೋಲನವೇ ಆರೋಗ್ಯಕರ ಜೀವನದ ಆಧಾರವಾಗಿದೆ.

ಆಯುರ್ವೇದದ ಪ್ರಕಾರ ಮಾನವ ಶರೀರವು ಪಂಚಮಹಾಭೂತಗಳಾದ ಪೃಥ್ವಿ, ಆಪ, ತೇಜಸ್, ವಾಯು ಮತ್ತು ಆಕಾಶಗಳಿಂದ ರೂಪುಗೊಂಡಿದೆ. ವಾತ, ಪಿತ್ತ ಮತ್ತು ಕಫ ಎಂಬ ತ್ರಿದೋಷಗಳ ಸಮತೋಲನವು ಆರೋಗ್ಯ ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ.

ಆರೋಗ್ಯವನ್ನು ಕಾಪಾಡಿಕೊಳ್ಳಲು ಆಯುರ್ವೇದದಲ್ಲಿ ಕೆಲವು ಪ್ರಮುಖ ಜೀವನಸೂತ್ರದ ಕ್ರಮಗಳನ್ನು ಈ ರೀತಿ ತಿಳಿಸಲಾಗುತ್ತದೆ

ದಿನಚರ್ಯೆ: ಪ್ರತಿದಿನ ನಿಗದಿತ ಸಮಯದಲ್ಲಿ ಎಚ್ಚರಗೊಳ್ಳುವುದು, ದಂತಧಾವನ, ಅಭ್ಯಂಗ, ವ್ಯಾಯಾಮ ಮತ್ತು ಸ್ನಾನ ಮುಂತಾದ ಕ್ರಮಗಳನ್ನು ಪಾಲಿಸುವುದು.

ಋತುಚರ್ಯೆ: ಋತುಗಳಿಗೆ ಅನುಗುಣವಾಗಿ ಆಹಾರ ಮತ್ತು ಜೀವನಶೈಲಿಯಲ್ಲಿ ಬದಲಾವಣೆ ಮಾಡಿಕೊಳ್ಳುವುದು.

ಆಹಾರ ಪದ್ಧತಿ: ಹಸಿವಿಗೆ ಅನುಗುಣವಾಗಿ, ಪೌಷ್ಟಿಕಾಂಶಯುಕ್ತ ಮತ್ತು ಸಮತೋಲಿತ ಆಹಾರ ಸೇವಿಸುವುದು.

ಹೀಗೆ ಹಲವಾರು ಉನ್ನತ ಮಟ್ಟದ ಜೀವನ ನಡೆಸಲು ಸೂತ್ರಗಳನ್ನು ತಿಳಿಸಿದ್ದಾರೆ ಆದರೆ ಅವುಗಳ ಪರಿಪಾಲನೆ ತುಂಬಾ ಮುಖ್ಯವಾಗಿರುತ್ತದೆ

ಧನತ್ರಯೋದಶಿ ಎಂದರೇನು?

ಧನತ್ರಯೋದಶಿಯನ್ನು ಧನತೇರಸ್ ಅಥವಾ ಧನತೇರಸ್ ಹಬ್ಬ ಎಂದೂ ಕರೆಯುತ್ತಾರೆ. ದೀಪಾವಳಿ ಹಬ್ಬದ ಆಚರಣೆಗಳ ಆರಂಭವನ್ನು ಸೂಚಿಸುವ ಪ್ರಮುಖ ದಿನ ಇದಾಗಿದೆ.'ಧನ' ಎಂದರೆ ಸಂಪತ್ತು, 'ತ್ರಯೋದಶಿ' ಎಂದರೆ ಹದಿಮೂರನೇ ತಿಥಿ. ಆಶ್ವಯುಜ ಅಥವಾ ಕಾರ್ತಿಕ ಮಾಸದ ತ್ರಯೋದಶಿಯಂದು ಈ ಹಬ್ಬವನ್ನು ಆಚರಿಸಲಾಗುತ್ತದೆ.

ಈ ದಿನ ಭಗವಾನ್ ಧನ್ವಂತರಿ, ಮಹಾಲಕ್ಷ್ಮಿ ಮತ್ತು ಕುಬೇರನನ್ನು ಪೂಜಿಸುವ ಸಂಪ್ರದಾಯವಿದೆ. ಮನೆಗಳಿಗೆ ಹೊಸ ಪಾತ್ರೆಗಳು, ಚಿನ್ನ, ಬೆಳ್ಳಿ ಹಾಗೂ ಇತರ ಶುಭ ವಸ್ತುಗಳನ್ನು ಖರೀದಿಸುವ ಪದ್ಧತಿಯೂ ಇದೆ ಮತ್ತು

ಧನತ್ರಯೋದಶಿಯಂದು ಧನ್ವಂತರಿಯನ್ನು ಪೂಜಿಸುತ್ತಾರೆ ಈ ಆರಾಧನೆಯ ಮುಖ್ಯ ಉದ್ದೇಶ ವೇನೆಂದರೆ ಕುಟುಂಬದ ಎಲ್ಲ ಸದಸ್ಯರಿಗೂ ಉತ್ತಮ ಆರೋಗ್ಯ, ದೀರ್ಘಾಯುಷ್ಯ ಮತ್ತು ರೋಗಮುಕ್ತ ಜೀವನ ದೊರೆಯಲಿ ಎಂಬ ಪ್ರಾರ್ಥನೆ.

ಧನತ್ರಯೋದಶಿಯ ಪೌರಾಣಿಕ ಹಿನ್ನೆಲೆ:

ಪುರಾಣಗಳ ಪ್ರಕಾರ ದೇವತೆಗಳು ಮತ್ತು ರಾಕ್ಷಸರು ಅಮೃತವನ್ನು ಪಡೆಯುವ ಉದ್ದೇಶದಿಂದ ಕ್ಷೀರಸಾಗರ ಮಂಥನ ಮಾಡಿದರು. ಈ ಮಂಥನದ ಸಂದರ್ಭದಲ್ಲಿ ಭಗವಾನ್ ಧನ್ವಂತರಿ ದೇವರು ಅಮೃತಕಲಶವನ್ನು ಹಿಡಿದು ಪ್ರತ್ಯಕ್ಷರಾದರು ಎಂಬ ಉಲ್ಲೇಖ ಇದೆ. ಉತ್ಪತ್ತಿ ಆದ ಅಮೃತವು ಅಮರತ್ವ ಮತ್ತು ಜೀವಶಕ್ತಿಯ ಸಂಕೇತವಾಗಿರುತ್ತದೆ ಹಾಗಾಗಿ ಧನ್ವಂತರಿದೇವರ ಆಗಮನವು ಆರೋಗ್ಯ, ಆಯುಷ್ಯ ಮತ್ತು ಚಿಕಿತ್ಸಾ ಜ್ಞಾನದ ಮಹತ್ವವನ್ನು ಸಾರುತ್ತದೆ.


ಆದ್ದರಿಂದ ಧನತ್ರಯೋದಶಿಯು ಕೇವಲ ಹಣ ಮತ್ತು ಚಿನ್ನವನ್ನು ಖರೀದಿಸುವ ದಿನವಲ್ಲ, ಆರೋಗ್ಯವೆಂಬ ಅಮೂಲ್ಯ ಸಂಪತ್ತನ್ನು ಗೌರವಿಸುವ ದಿನವೂ ಇದಾಗಿದೆ. ಧನ್ವಂತರಿ ಜಯಂತಿ ಮತ್ತು ಧನತ್ರಯೋದಶಿಯ ನಡುವಿನ ಸಂಬಂಧ

ಈ ಎರಡೂ ಆಚರಣೆಗಳು ಒಂದೇ ತ್ರಯೋದಶಿ ತಿಥಿಯೊಂದಿಗೆ ಸಂಬಂಧ ಹೊಂದಿವೆ. ಧನ್ವಂತರಿ ಜಯಂತಿಯು ಭಗವಾನ್ ಧನ್ವಂತರಿಯವರ ಸ್ಮರಣೆ ಮತ್ತು ಆಯುರ್ವೇದದ ಪರಂಪರೆಯನ್ನು ಗೌರವಿಸುವುದಕ್ಕೆ ಮಹತ್ವ ನೀಡುತ್ತದೆ. ಧನತ್ರಯೋದಶಿಯು ಆರೋಗ್ಯದ ಜೊತೆಗೆ ಸಂಪತ್ತು ಮತ್ತು ಸಮೃದ್ಧಿಯನ್ನು ಬಯಸುವ ಹಬ್ಬವಾಗಿದೆ.

ಈ ಎರಡೂ ಆಚರಣೆಗಳ ಮೂಲಕ ಭಾರತೀಯ ಸಂಸ್ಕೃತಿಯು ನಮಗೆ ನೀಡುವ ಸಂದೇಶವೆಂದರೆ, ಸಂಪತ್ತು ಎಷ್ಟೇ ಇದ್ದರೂ ಉತ್ತಮ ಆರೋಗ್ಯವಿಲ್ಲದಿದ್ದರೆ ಜೀವನದಲ್ಲಿ ಪೂರ್ಣ ಪ್ರಮಾಣದ ಸಂತೋಷ ಕಾಣಲು ಸಾಧ್ಯವಿಲ್ಲ ಏಕೆಂದರೆ,

ಇಂದಿನ ಆಧುನಿಕ ಜೀವನಶೈಲಿಯಲ್ಲಿ ಮಧುಮೇಹ, ಅಧಿಕ ರಕ್ತದೊತ್ತಡ, ಬೊಜ್ಜು, ಹೃದಯ ಸಂಬಂಧಿ ಕಾಯಿಲೆಗಳು, ನಿದ್ರಾಹೀನತೆ ಮತ್ತು ಮಾನಸಿಕ ಒತ್ತಡದಂತಹ ಸಮಸ್ಯೆಗಳು ಹೆಚ್ಚಾಗುತ್ತಿವೆ. ಇದಕ್ಕೆ ಕಾರಣ ಅನಿಯಮಿತ ಆಹಾರ ಪದ್ಧತಿ, ದೈಹಿಕ ಚಟುವಟಿಕೆಯ ಕೊರತೆ, ಅತಿಯಾದ ಮೊಬೈಲ್ ಬಳಕೆ, ನಿದ್ರೆಯ ಅಭಾವ ಮತ್ತು ಒತ್ತಡದ ಜೀವನಶೈಲಿಯು ಪ್ರಮುಖ ಕಾರಣಗಳಾಗಿವೆ.

ಇಂತಹ ಸಂದರ್ಭದಲ್ಲಿ ಆಯುರ್ವೇದದಲ್ಲಿ ತಿಳಿಸಿರುವ ಆರೋಗ್ಯ ಸಂರಕ್ಷಣಾ ತತ್ವಗಳು ಜನರಿಗೆ ಉತ್ತಮ ಮಾರ್ಗದರ್ಶನಗಳಾಗಿವೆ.



ಅವುಗಳಲ್ಲಿ ಮುಖ್ಯವಾಗಿ,

1)ಪ್ರತಿದಿನ ನಿಯಮಿತವಾಗಿ ವ್ಯಾಯಾಮ ಮಾಡುವುದು.

ಸ್ಥಳೀಯವಾಗಿ ಲಭ್ಯವಿರುವ ಋತುಸಹಜ ಆಹಾರ ಸೇವಿಸುವುದು.

2) ಹಣ್ಣು, ತರಕಾರಿ ಮತ್ತು ನಾರಿನಂಶ ಹೆಚ್ಚಿರುವ ಆಹಾರಕ್ಕೆ ಆದ್ಯತೆ ನೀಡುವುದು.

3)ಅತಿಯಾದ ಸಿಹಿ, ಉಪ್ಪು ಮತ್ತು ಸಂಸ್ಕರಿಸಿದ ಆಹಾರಗಳ ಸೇವನೆಯನ್ನು ಕಡಿಮೆ ಮಾಡುವುದು.

4)ಸಾಕಷ್ಟು ನೀರು ಕುಡಿಯುವುದು.

ಮಾನಸಿಕ ಒತ್ತಡವನ್ನು ಕಡಿಮೆ ಮಾಡಲು ಯೋಗ ಮತ್ತು ಧ್ಯಾನ ಮಾಡುವುದು.

5)ವೈದ್ಯರ ಸಲಹೆಯಿಲ್ಲದೆ ಔಷಧಿಗಳನ್ನು ಸೇವಿಸದಿರುವುದು.ಹೀಗೆ ಕೆಲವು ಸರಳ ಸೂತ್ರಗಳನ್ನು ಅಳವಡಿಸಿ ಕೊಳ್ಳುವುದು ಉತ್ತಮವಾದ ಜೀವನ ಮಾರ್ಗವಾಗಿದೆ. ಇದರೊಂದಿಗೆ ಆಯುರ್ವೇದದ ಔಷಧಿಗಳು ಮತ್ತು ಚಿಕಿತ್ಸಾ ವಿಧಾನಗಳನ್ನು ಸಹ ಅರ್ಹ ಆಯುರ್ವೇದ ವೈದ್ಯರ ಸಲಹೆ ಹಾಗೂ ವೈಜ್ಞಾನಿಕ ಆಧಾರದ ಮೇಲೆ ಬಳಸಬೇಕು. ನೈಸರ್ಗಿಕ ಔಷಧಿ ಎಂದ ಮಾತ್ರಕ್ಕೆ ಎಲ್ಲರಿಗೂ ಎಲ್ಲವೂ ಸುರಕ್ಷಿತ ಎಂದು ಭಾವಿಸಬಾರದು.

ಆಯುರ್ವೇದದ ಬೆಳವಣಿಗೆಯಲ್ಲಿ ವೈದ್ಯರ ಮತ್ತು ಸಂಶೋಧಕರ ಪಾತ್ರ ಅತ್ಯಂತ ಪ್ರಾಮುಖ್ಯತೆಯನ್ನು ಪಡೆಯುತ್ತದೆ.

ನಮ್ಮ ಭಾರತವು ಆಯುರ್ವೇದದ ತವರೂರು. ಚರಕ ಸಂಹಿತೆ, ಸುಶ್ರುತ ಸಂಹಿತೆ ಮತ್ತು ಅಷ್ಟಾಂಗ ಹೃದಯದಂತಹ ಪ್ರಾಚೀನ ಗ್ರಂಥಗಳು ವೈದ್ಯಕೀಯ ಜ್ಞಾನಕ್ಕೆ ಅಮೂಲ್ಯ ಕೊಡುಗೆ ನೀಡಿರುತ್ತವೆ.

ಮಹರ್ಷಿ ಚರಕರು ಕಾಯಚಿಕಿತ್ಸಾ ಕ್ಷೇತ್ರದಲ್ಲಿ ಮತ್ತು ಆಚಾರ್ಯ ಸುಶ್ರುತರು ಶಲ್ಯಚಿಕಿತ್ಸೆಯ ಕ್ಷೇತ್ರದಲ್ಲಿ ಮಹತ್ವದ ಕೊಡುಗೆ ನೀಡಿದ್ದಾರೆ.

ಇಂದು ಆಯುರ್ವೇದ ಶಿಕ್ಷಣ ಸಂಸ್ಥೆಗಳು, ಆಸ್ಪತ್ರೆಗಳು, ಸಂಶೋಧನಾ ಕೇಂದ್ರಗಳು ಮತ್ತು ಔಷಧ ತಯಾರಿಕಾ ಸಂಸ್ಥೆಗಳು ಆಯುರ್ವೇದದ ಬೆಳವಣಿಗೆಗೆ ಶ್ರಮಿಸುತ್ತಿದ್ದಾರೆ.

ಆಯುರ್ವೇದದ ಔಷಧಿಗಳ ಗುಣಮಟ್ಟ, ಸುರಕ್ಷತೆ, ಪರಿಣಾಮಕಾರಿತ್ವ ಮತ್ತು ಪ್ರಮಾಣೀಕರಣಕ್ಕೆ ಹೆಚ್ಚಿನ ಆದ್ಯತೆ ನೀಡೂತ್ತಿದ್ದಾರೆ.ಆಧುನಿಕ ವೈಜ್ಞಾನಿಕ ಸಂಶೋಧನೆಯ ನೆರವಿನಿಂದ ಆಯುರ್ವೇದದ ಜ್ಞಾನವನ್ನು ಮುಂದಿನ ಪೀಳಿಗೆಗೆ ತಲುಪಿಸುವುದು ಅತ್ಯಂತ ಜವಾಬ್ದಾರಿಯುತ ಕಾರ್ಯವಾಗಿದೆ.ಆಯುರ್ವೇದವು ಕೇವಲ ರೋಗ ನಿವಾರಣೆಯ ವೈದ್ಯ ಪದ್ಧತಿಯಲ್ಲ; ಅದು ಆರೋಗ್ಯವನ್ನು ಕಾಪಾಡುವ, ರೋಗ ನಿರೋಧಕ ಶಕ್ತಿಯನ್ನು ವೃದ್ಧಿಸುವ ಮತ್ತು ದೈಹಿಕ, ಮಾನಸಿಕ ಹಾಗೂ ಆತ್ಮೀಯ ಸ್ವಾಸ್ಥ್ಯವನ್ನು ಸಾಧಿಸಲು ಮಾರ್ಗದರ್ಶನ ನೀಡುವ ಸಮಗ್ರ ಜೀವನ ವಿಜ್ಞಾನವಾಗಿದೆ.ಆದ್ದರಿಂದ ಧನ್ವಂತರಿ ಜಯಂತಿಯಂದು ನಾವೆಲ್ಲರೂ ಆರೋಗ್ಯ ಸಂರಕ್ಷಣೆಯ ಸಂಕಲ್ಪ ಮಾಡೋಣ. ಆಯುರ್ವೇದದ ಅಮೂಲ್ಯ ಜ್ಞಾನವನ್ನು ಮುಂದಿನ ಪೀಳಿಗೆಗೆ ಪರಿಚಯಿಸೋಣ. ಆರೋಗ್ಯವಂತ ವ್ಯಕ್ತಿಯಿಂದ ಆರೋಗ್ಯವಂತ ಕುಟುಂಬ, ಆರೋಗ್ಯವಂತ ಕುಟುಂಬದಿಂದ ಆರೋಗ್ಯವಂತ ಸಮಾಜ ಹಾಗೂ ಆರೋಗ್ಯವಂತ ಸಮಾಜದಿಂದ ಸದೃಢ ರಾಷ್ಟ್ರ ನಿರ್ಮಾಣ ಸಾಧ್ಯ.

"ಆರೋಗ್ಯವೇ ಮಹಾಭಾಗ್ಯ, ಆರೋಗ್ಯವೇ ಜೀವನದ ಸೌಭಾಗ್ಯ" ಎಂಬ ಧ್ಯೇಯದೊಂದಿಗೆ ಭಗವಾನ್ ಶ್ರೀ ಧನ್ವಂತರಿಯ ಆಶೀರ್ವಾದವೂ ಪ್ರತಿಯೊಬ್ಬರಿಗೂ ದಯಪಾಲಿಸಲಿ.ಸರ್ವೇ ಸಂತು ನಿರಾಮಯಾಃ – ಎಲ್ಲರೂ ರೋಗಮುಕ್ತರಾಗಿ, ಆರೋಗ್ಯ ಮತ್ತು ಆಯುಷ್ಯದಿಂದ ಸುಖಮಯ ಜೀವನ ನಡೆಸಲಿ ಎಂದು ತಿಳಿಸುತ್ತಾ

"ಆಯುರ್ವೇದದ ಜ್ಞಾನ ಮನೆಮನೆಗೆ ತಲುಪಲಿ, ಆರೋಗ್ಯದ ಬೆಳಕು ಪ್ರತಿಯೊಬ್ಬರ ಬದುಕಿನಲ್ಲಿ ದೀಪದಂತೆ ಬಳಗಲಿ." ಸರ್ವರಿಗೂ ಧನ್ವಂತರಿ ಜಯಂತಿ, ಧನತ್ರಯೋದಶಿಯ,ದೀಪಾವಳಿಯ ಮತ್ತೂ ಬಲಿಪಾಡ್ಯಮಿಯ ಹಾರ್ದಿಕ ಶುಭಾಶಯಗಳು



ಲೇಖಕರು ಡಾ. ಸುವರ್ಣ ನಿಡಗುಂದಿ.
ಡಿಜಿಎಂ ಆರ್ಯುವೇದ ಕಾಲೇಜು ಗದಗ



ಎಸ್‌ಐಆರ್ ವಿರೋಧಿಸಿ ಜಿಲ್ಲಾಡಳಿತ ಭವನದ ಎದುರು ಪ್ರತಿಭಟನೆ। ಚುನಾವಣಾ ಆಯುಕ್ತರ ರಾಜೀನಾಮೆಗೆ ಆಗ್ರಹ।

ವೋಟ್ ಬಚಾವೋ, ದೇಶ ಬಚಾವೋ ಘೋಷಣೆ ಮೊಳಗಿಸಿದ ಕಾಂಗ್ರೆಸ್



ಪಾಂಡವ ನ್ಯೂಸ್, ಹಾವೇರಿ : ಮತದಾರರ ಹಕ್ಕುಗಳ ರಕ್ಷಣೆ ಹಾಗೂ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ವಿರೋಧಿಸಿ ಜಿಲ್ಲಾ ಕಾಂಗ್ರೆಸ್ ವತಿಯಿಂದ ಗುರುವಾರ ನಗರದ ಜಿಲ್ಲಾಡಳಿತ ಭವನದ ಎದುರು ಪ್ರತಿಭಟನೆ ನಡೆಸಲಾಯಿತು.

'ವೋಟ್ ಬಚಾವೋ, ದೇಶ ಬಚಾವೋ' ಘೋಷಣೆಯೊಂದಿಗೆ ನಡೆದ ಪ್ರತಿಭಟನೆಯಲ್ಲಿ ಕೇಂದ್ರ ಸರ್ಕಾರ ಹಾಗೂ ಚುನಾವಣಾ ಆಯೋಗದ ವಿರುದ್ಧ ಕಾಂಗ್ರೆಸ್ ಮುಖಂಡರು ಆಕ್ರೋಶ ವ್ಯಕ್ತಪಡಿಸಿದರು. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಆಗ್ರಹಿಸಿದರು.

ಪ್ರತಿಭಟನೆಯ ನೇತೃತ್ವ ವಹಿಸಿದ್ದ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಂಜೀವಕುಮಾರ ನೀರಲಗಿ ಮಾತನಾಡಿ, ಚುನಾವಣಾ ಆಯೋಗ ಸಂವಿಧಾನಬದ್ಧ ಸ್ವಾಯತ್ತ ಸಂಸ್ಥೆಯಾಗಿದ್ದರೂ ಕೇಂದ್ರ ಸರ್ಕಾರದ ಒತ್ತಡಕ್ಕೆ ಮಣಿದು ಕಾರ್ಯನಿರ್ವಹಿಸುತ್ತಿರುವುದು ಸರಿಯಲ್ಲ. ಎಸ್‌ಐಆರ್ ಪ್ರಕ್ರಿಯೆಯಿಂದ ಅರ್ಹ ಮತದಾರರ ಹಕ್ಕುಗಳಿಗೆ ಧಕ್ಕೆಯಾಗಬಾರದು. ಚುನಾವಣಾ ಆಯುಕ್ತರು ಕೂಡಲೇ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ಮುಂದಿನ ವಾರದಿಂದ ಜಿಲ್ಲೆಯ ಎಲ್ಲ ಬ್ಲಾಕ್ ಕಾಂಗ್ರೆಸ್ ಘಟಕಗಳ ವ್ಯಾಪ್ತಿಯಲ್ಲಿ 'ದೇಶ ಬಚಾವೋ, ವೋಟ್ ಬಚಾವೋ' ಆಂದೋಲನ ಹಮ್ಮಿಕೊಳ್ಳಲಾಗುವುದು. ಕಾರ್ಯಕರ್ತರು ಮನೆಮನೆಗೆ ತೆರಳಿ ಮತದಾರರ ಪಟ್ಟಿ ಪರಿಶೀಲಿಸಿ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದರು.

ಬ್ಯಾಡಗಿ ಶಾಸಕ ಬಸವರಾಜ ಶಿವಣ್ಣನವರ ಮಾತನಾಡಿ, ಚುನಾವಣಾ ಆಯೋಗ ಕೇಂದ್ರ ಸರ್ಕಾರದ ಒತ್ತಡಕ್ಕೆ ಮಣಿದು ಕಾರ್ಯನಿರ್ವಹಿಸುತ್ತಿರುವುದು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ಧಕ್ಕೆ ತರುತ್ತಿದೆ.

ಯುವಶಕ್ತಿಯೇ ದೇಶದ ಶಕ್ತಿಯಾಗಿದ್ದು, ಮತದಾರರ ಹಕ್ಕುಗಳ ರಕ್ಷಣೆಗಾಗಿ ಕಾಂಗ್ರೆಸ್ ಹೋರಾಟ ಅನಿವಾರ್ಯವಾಗಿದೆ. ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯಲು ಸಂಘಟಿತ ಹೋರಾಟ ನಡೆಸಬೇಕಿದೆ ಎಂದರು. ಶಿಗ್ಗಾಂವಿ ಶಾಸಕ ಯಾಸೀರ್‌ಖಾನ್ ಪಠಾಣ್ ಮಾತನಾಡಿ, ಪ್ರಜಾಪ್ರಭುತ್ವ ಮತ್ತು ಸ್ವಾತಂತ್ರ್ಯದ ಉಳಿವಿಗಾಗಿ ಹೋರಾಟ ನಿರಂತರವಾಗಿರಬೇಕು.

ಜ್ಞಾನೇಶ್ ಕುಮಾರ್, ಅಮಿತ್ ಶಾ ಹಾಗೂ ನರೇಂದ್ರ ಮೋದಿ ರಾಜೀನಾಮೆ ನೀಡಬೇಕು ಎಂಬುದು ನಮ್ಮ ಆಗ್ರಹ. ರಾಹುಲ್ ಗಾಂಧಿ ನೇತೃತ್ವದಲ್ಲಿ ನಡೆಯುತ್ತಿರುವ ಹೋರಾಟಕ್ಕೆ ಒಂದಲ್ಲ ಒಂದು ದಿನ ಜಯ ಸಿಗಲಿದೆ. ಕಾಂಗ್ರೆಸ್ ಕಾರ್ಯಕರ್ತರು ಹೋರಾಟದಿಂದ ಹಿಂದೆ ಸರಿಯಬಾರದು ಎಂದು ಹೇಳಿದರು.

ಹೆಸ್ಕಾಂ ನಿಗಮದ ಅಧ್ಯಕ್ಷ ಅಜ್ಜಂಪೀರ್ ಖಾದ್ರಿ ಮಾತನಾಡಿ, ಮತದಾನ ಪ್ರಜಾಪ್ರಭುತ್ವದ ಪ್ರಮುಖ ಹಕ್ಕು. ಪ್ರತಿಯೊಬ್ಬ ಅರ್ಹ ಮತದಾರನಿಗೂ ಮತದಾನದ ಅವಕಾಶ ದೊರೆಯಬೇಕು. ಎಸ್‌ಐಆರ್ ಹೆಸರಿನಲ್ಲಿ ಯಾವುದೇ ಅರ್ಹ ಮತದಾರರ ಹೆಸರು ಕೈಬಿಡದಂತೆ ಎಚ್ಚರ ವಹಿಸಬೇಕು. ಕಾರ್ಯಕರ್ತರು ಮನೆಮನೆಗೆ ತೆರಳಿ ಮತದಾರರ ಪಟ್ಟಿಯನ್ನು ಪರಿಶೀಲಿಸಿ ಜನರಲ್ಲಿ ಜಾಗೃತಿ ಮೂಡಿಸಬೇಕು. ಪ್ರಜಾಪ್ರಭುತ್ವದ ಆಶಯಗಳ ಉಳಿವಿಗೆ ಸಂಘಟಿತ ಹೋರಾಟ ಅಗತ್ಯ ಎಂದರು.

ಹಾನಗಲ್ ಶಾಸಕ ಶ್ರೀನಿವಾಸ ಮಾನೆ ಮಾತನಾಡಿ, ಎಸ್‌ಐಆರ್ ಪ್ರಕ್ರಿಯೆಯಲ್ಲಿ ಮತದಾರರ ಹಕ್ಕುಗಳನ್ನು ರಕ್ಷಿಸುವ ಜವಾಬ್ದಾರಿ ಕಾರ್ಯಕರ್ತರ ಮೇಲಿದೆ. ರಾತ್ರೋರಾತ್ರಿ ಸಾವಿರಾರು ನಮೂನೆ-7 ಅರ್ಜಿಗಳನ್ನು ಹಿಂಪಡೆಯಲಾಗಿದೆ. ಬಿಜೆಪಿಯವರಿಗೆ ಧೈರ್ಯವಿದ್ದರೆ ಯಾವ ಕ್ಷೇತ್ರದಲ್ಲಿ ಎಷ್ಟು ಅರ್ಜಿಗಳನ್ನು ಹಿಂಪಡೆಯಲಾಗಿದೆ ಎಂಬುದನ್ನು ಬಹಿರಂಗಪಡಿಸಲಿ ಎಂದು ಸವಾಲು ಹಾಕಿದರು.

ಪಶ್ಚಿಮ ಪದವೀಧರರ ಕ್ಷೇತ್ರದ ಪರಿಷತ್ ಚುನಾವಣೆಯ ಫಲಿತಾಂಶದಿಂದ ಕಾಂಗ್ರೆಸ್ ಕಾರ್ಯಕರ್ತರು ಹಿಂಜರಿಯುವ ಅಗತ್ಯವಿಲ್ಲ. ಸೋಲು-ಗೆಲುವು ಸಹಜ. ಮುಂಬರುವ ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಪಟ್ಟಣ ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ಚುನಾವಣೆಗಳು ಪಕ್ಷದ ಸಂಘಟನಾ ಶಕ್ತಿಯನ್ನು ಸಾಬೀತುಪಡಿಸುವ ವೇದಿಕೆಗಳಾಗಿವೆ. ಕಾರ್ಯಕರ್ತರು ಸಣ್ಣಪುಟ್ಟ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಒಗ್ಗಟ್ಟಿನಿಂದ ಪಕ್ಷ ಸಂಘಟನೆಗೆ ಮುಂದಾಗಬೇಕು ಎಂದು ಕರೆ ನೀಡಿದರು.

ಪ್ರತಿಭಟನೆಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಹನುಮಂತಪ್ಪ ಮರಗಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರಭುಗೌಡ ಬಿಷ್ಟನಗೌಡ್ರ,

ಮಹಿಳಾ ಕಾಂಗ್ರೆಸ್ ಜಿಲ್ಲಾಧ್ಯಕ್ಷೆ ವಸಂತಾ ಬಾಗೂರು, ಮುಖಂಡರಾದ ಎಂ.ಎಂ. ಹಿರೇಮಠ, ಗುಡ್ಡನಗೌಡ ಅಂದಾನಿಗೌಡ್ರ, ಎಂ.ಎಂ. ಮೈದೂರ, ಹನುಮಂತಪ್ಪ ಬಂಡಿವಡ್ಡರ, ಬಸವರಾಜ ಹೆಡಿಗೊಂಡ, ಶಂಕರ ಮೆಹರವಾಡೆ, ಶ್ರೀಧರ ದೊಡ್ಡಮನಿ ಸೇರಿದಂತೆ ಜಿಲ್ಲೆಯ ವಿವಿಧ ಬ್ಲಾಕ್‌ಗಳ ಕಾಂಗ್ರೆಸ್ ಮುಖಂಡರು, ಪದಾಧಿಕಾರಿಗಳು ಹಾಗೂ ನೂರಾರು ಕಾರ್ಯಕರ್ತರು ಪಾಲ್ಗೊಂಡಿದ್ದರು.

ದೆಹಲಿ ಕಾರ್ಯಕ್ರಮಕ್ಕೆ ಗೈರು; ದರ್ಶನ್ ಲಮಾಣಿ ಸೇರಿ ಆರು ಪದಾಧಿಕಾರಿಗಳ ಅಮಾನತು



ಪಾಂಡವ ನ್ಯೂಸ್, ಹಾವೇರಿ : ದೆಹಲಿ ಕಾರ್ಯಕ್ರಮಕ್ಕೆ ಗೈರುಹಾಜರಾದ ಹಿನ್ನೆಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ರುದ್ರಪ್ಪ ಲಮಾಣಿ ಅವರ ಪುತ್ರ, ಯುವ ಕಾಂಗ್ರೆಸ್ ಹಾವೇರಿ ಜಿಲ್ಲಾಧ್ಯಕ್ಷ ದರ್ಶನ್ ಕುಮಾರ ಲಮಾಣಿ ಅವರನ್ನು ಜಿಲ್ಲಾಧ್ಯಕ್ಷ ಸ್ಥಾನದಿಂದ ಅಮಾನತುಗೊಳಿಸಲಾಗಿದೆ. ಪಕ್ಷದ ಈ ಕ್ರಮ ಜಿಲ್ಲೆಯ ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.

ನ.5ರಂದು ಭಾರತೀಯ ಯುವ ಕಾಂಗ್ರೆಸ್ ನಾಯಕತ್ವ ಅಮಾನತು ಆದೇಶ ಹೊರಡಿಸಿದ್ದು, ದರ್ಶನ್ ಕುಮಾರ ಆರ್. ಸೇರಿದಂತೆ ಆರು ಪದಾಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಿದೆ. ದೆಹಲಿಯಲ್ಲಿ ನಡೆದ ಯುವ ಕಾಂಗ್ರೆಸ್‌ನ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳುವಂತೆ ಸಂಘಟನೆಯ ವತಿಯಿಂದ ಎಲ್ಲ ಪದಾಧಿಕಾರಿಗಳಿಗೆ ಸೂಚನೆ ನೀಡಲಾಗಿತ್ತು. ಆದರೆ, ಸೂಚನೆಯ ಹೊರತಾಗಿಯೂ ಕಾರ್ಯಕ್ರಮಕ್ಕೆ ಗೈರುಹಾಜರಾಗಿರುವುದನ್ನು ಗಂಭೀರವಾಗಿ ಪರಿಗಣಿಸಿ ಈ ಕ್ರಮ ಕೈಗೊಳ್ಳಲಾಗಿದೆ.

ಅಮಾನತುಗೊಂಡವರ ಪಟ್ಟಿಯಲ್ಲಿ ನಾಲ್ವರು ರಾಜ್ಯ ಕಾರ್ಯದರ್ಶಿಗಳು ಹಾಗೂ ಇಬ್ಬರು ಜಿಲ್ಲಾಧ್ಯಕ್ಷರು ಸೇರಿದ್ದಾರೆ. ರಾಜ್ಯ ಕಾರ್ಯದರ್ಶಿಗಳಾದ ಅಬ್ದುಲ್ ಅಜೀಜ್, ಸುರಜ್ ಅವಟಿ, ಪವನ್ ಸಾಳಿಯಾನ್ ಹಾಗೂ ಅಭಿಷೇಕ್ ಸಿ. ಅವರನ್ನು ಅಮಾನತುಗೊಳಿಸಲಾಗಿದೆ. ಹಾವೇರಿ ಜಿಲ್ಲಾಧ್ಯಕ್ಷ ದರ್ಶನ್ ಕುಮಾರ ಲಮಾಣಿ ಮತ್ತು ಸುಬ್ರಮಣ್ಯ ಸಿರ್ಸಿಕರ್ ಅವರ ವಿರುದ್ಧವೂ ಕ್ರಮ ಜರುಗಿಸಲಾಗಿದೆ.

ಪಕ್ಷದ ಸಂಘಟನಾ ಚಟುವಟಿಕೆಗಳಲ್ಲಿ ಪದಾಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸಬೇಕು. ವರಿಷ್ಠರ ಸೂಚನೆ ಹಾಗೂ ಸಂಘಟನೆಯ ಶಿಸ್ತನ್ನು ಪಾಲಿಸುವುದು ಪ್ರತಿಯೊಬ್ಬ ಪದಾಧಿಕಾರಿಯ ಜವಾಬ್ದಾರಿಯಾಗಿದೆ. ಈ ಹಿನ್ನೆಲೆಯಲ್ಲಿ ಗೈರುಹಾಜರಿಯನ್ನು ಶಿಸ್ತು ಉಲ್ಲಂಘನೆ ಎಂದು ಪರಿಗಣಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತು ಆದೇಶ ಹೊರಡಿಸಲಾಗಿದೆ.

ರಾಜಕೀಯ ವಲಯದಲ್ಲಿ ಚರ್ಚೆ : ಜಿಲ್ಲಾ ಉಸ್ತುವಾರಿ ಸಚಿವ ರುದ್ರಪ್ಪ ಲಮಾಣಿ ಅವರ ಪುತ್ರನೇ ಯುವ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸ್ಥಾನದಿಂದ ಅಮಾನತುಗೊಂಡಿರುವುದು ರಾಜಕೀಯ ವಲಯದಲ್ಲಿ ಕುತೂಹಲ ಮೂಡಿಸಿದೆ. ಸಚಿವರ ಪುತ್ರ ಎಂಬ ಕಾರಣಕ್ಕೆ ಯಾವುದೇ ವಿಶೇಷ ವಿನಾಯಿತಿ ನೀಡದೆ ಸಂಘಟನೆಯ ನಿಯಮದಂತೆ ಕ್ರಮ ಕೈಗೊಂಡಿರುವುದು ಕಾಂಗ್ರೆಸ್ ಕಾರ್ಯಕರ್ತರಲ್ಲಿಯೂ ಚರ್ಚೆಗೆ ಕಾರಣವಾಗಿದೆ.

ಈ ಬೆಳವಣಿಗೆ ಹಾವೇರಿ ಜಿಲ್ಲಾ ಯುವ ಕಾಂಗ್ರೆಸ್ ಸಂಘಟನೆಯ ಮುಂದಿನ ನಾಯಕತ್ವದ ಬದಲಾವಣೆಯ ಬಗ್ಗೆಯೂ ಕುತೂಹಲ ಮೂಡಿಸಿದೆ. ಅಮಾನತು ಆದೇಶದ ಬೆನ್ನಲ್ಲೇ ಜಿಲ್ಲೆಯ ಯುವ ಕಾಂಗ್ರೆಸ್ ರಾಜಕೀಯದಲ್ಲಿ ಹೊಸ ಚರ್ಚೆಗಳು ಆರಂಭವಾಗಿವೆ.

ವಿಜಯೇಂದ್ರ ಜನ್ಮದಿನ: ಕೆ. ಶಿವಲಿಂಗಪ್ಪರಿಂದ ಸನ್ಮಾನ

ಪಾಂಡವ ನ್ಯೂಸ್, ರಾಣೆಬೆನ್ನೂರು : ಬೆಂಗಳೂರಿನ ಡಾಲರ್ಸ್ ಕಾಲೋನಿಯಲ್ಲಿರುವ ನಿವಾಸದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ಜನ್ಮದಿನೋತ್ಸವ ಸರಳವಾಗಿ ನಡೆಯಿತು.

ಈ ಸಂದರ್ಭದಲ್ಲಿ ರಾಣೆಬೆನ್ನೂರಿನ ಹಿರಿಯ ನ್ಯಾಯವಾದಿ ಹಾಗೂ ಬಿಜೆಪಿ ಮುಖಂಡ ಕೆ. ಶಿವಲಿಂಗಪ್ಪ ಮತ್ತು ಹಿರೇಕೆರೂರಿನ ಪಾಲಾಕ್ಷಗೌಡ ಪಾಟೀಲ ಅವರು ವಿಜಯೇಂದ್ರ ಅವರನ್ನು ಭೇಟಿಯಾಗಿ ಜನ್ಮದಿನದ ಶುಭಾಶಯ ಕೋರಿದರು. ಶಾಲು ಹೊದಿಸಿ, ಮಾಲೆ ಹಾಕಿ ಹಾಗೂ ಸ್ಮರಣಿಕೆ ನೀಡಿ ಗೌರವಪೂರ್ವಕವಾಗಿ ಅಭಿನಂದಿಸಿದರು. ವಿಜಯೇಂದ್ರ ಅವರ ರಾಜಕೀಯ ನಾಯಕತ್ವ ಮತ್ತು ಪಕ್ಷ ಸಂಘಟನೆಯ ಕಾರ್ಯವನ್ನು ಮೆಚ್ಚಿ ಶುಭ ಹಾರೈಸಿದರು.

ರಾಜ್ಯದಲ್ಲಿ ಬಿಜೆಪಿ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಅವರ ನಾಯಕತ್ವಕ್ಕೆ ಬೆಂಬಲ ವ್ಯಕ್ತಪಡಿಸಿದ ಮುಖಂಡರು, ಮುಂದಿನ ದಿನಗಳಲ್ಲಿಯೂ



ಪಕ್ಷದ ಸಂಘಟನಾ ಚಟುವಟಿಕೆಗಳಿಗೆ ಸಹಕಾರ ನೀಡುವ ಆಶಯ ವ್ಯಕ್ತಪಡಿಸಿದರು.

ಬೆಂಗಳೂರಿನ ನಿವಾಸದಲ್ಲಿ ನಡೆದ ಈ ಭೇಟಿಯ ವೇಳೆ ಉಭಯ ಮುಖಂಡರು ವಿಜಯೇಂದ್ರ ಅವರೊಂದಿಗೆ ಆತ್ಮೀಯವಾಗಿ ಮಾತನಾಡಿ ಜನ್ಮದಿನದ ಶುಭಾಶಯ ವಿನಿಮಯ ಮಾಡಿಕೊಂಡರು. ಸನ್ಮಾನ ಹಾಗೂ ಅಭಿನಂದನೆಯ ಮೂಲಕ ಜನ್ಮದಿನದ ಸಂಭ್ರಮದಲ್ಲಿ ಪಾಲ್ಗೊಂಡರು.

ಮೂರು ವರ್ಷಗಳಿಂದ ಬಾರದ ಅಂಗವಿಕಲ ಪಿಂಚಣಿ!

ವಿಶೇಷಚೇತನನ ಸಮಸ್ಯೆ ಪರಿಹಾರಕ್ಕೆ ಡಿಸಿ ಸೂಚನೆ



ಪಾಂಡವ ನ್ಯೂಸ್, ಹಾವೇರಿ: ತಾಲೂಕಿನ ಕನಕಪುರ ಗ್ರಾಮದ ವಿಶೇಷಚೇತನ ರಾಜು ಕೋಚಿಕಾಳ್ ಅವರಿಗೆ ಕಳೆದ ಮೂರು ವರ್ಷಗಳಿಂದ ಅಂಗವಿಕಲ ಪಿಂಚಣಿ ಬಾರದ ಹಿನ್ನೆಲೆಯಲ್ಲಿ ವೃದ್ಧ ತಂದೆ-ತಾಯಿ ಸಂಕಷ್ಟ ಅನುಭವಿಸುತ್ತಿದ್ದಾರೆ. ಮಗನಿಗೆ ಬರಬೇಕಾದ ಪಿಂಚಣಿ ಸ್ಥಗಿತಗೊಂಡಿದ್ದರಿಂದ ಅದನ್ನು ಮರುಜಾರಿಗೊಳಿಸುವಂತೆ ವೃದ್ಧ ದಂಪತಿ ಸರ್ಕಾರಿ ಕಚೇರಿಗಳಿಗೆ ಅಲೆದಾಡಿ ಸುಸ್ತಾಗಿದ್ದರು.

ಈ ವಿಷಯ ಜಿಲ್ಲಾಧಿಕಾರಿ ವಿಜಯ ಮಹಾಂತೇಶ ಬಿ. ದಾನಮ್ಮನವರ ಅವರ ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ಅವರು ರಾಜು ಅವರನ್ನು ಖುದ್ದಾಗಿ ಭೇಟಿಯಾಗಿ ಕುಟುಂಬದ ಅಹವಾಲು ಆಲಿಸಿದರು.

ಕಳೆದ ಮೂರು ವರ್ಷಗಳಿಂದ ಪಿಂಚಣಿ ಸ್ಥಗಿತಗೊಂಡಿರುವ ಕುರಿತು ಮಾಹಿತಿ ಪಡೆದ ಜಿಲ್ಲಾಧಿಕಾರಿಗಳು, ಸಂಬಂಧಿಸಿದ ಅಧಿಕಾರಿಗಳಿಗೆ ಸಮಸ್ಯೆಯ ಪರಿಶೀಲನೆ ನಡೆಸಿ ಶೀಘ್ರ ಪರಿಹಾರ ಕಲ್ಪಿಸುವಂತೆ ಸೂಚನೆ ನೀಡಿದರು.

ವಿಶೇಷಚೇತನನ ಪಿಂಚಣಿ ಸಮಸ್ಯೆ ಬಗೆಹರಿಸಲು ಜಿಲ್ಲಾಧಿಕಾರಿಗಳು ಮುಂದಾಗಿರುವುದು ವೃದ್ಧ ದಂಪತಿಯಲ್ಲಿ ಆಶಾಭಾವನೆ ಮೂಡಿಸಿದೆ. ಮಗನ ಹಕ್ಕಿನ ಪಿಂಚಣಿಗಾಗಿ ವೃದ್ಧಾಪ್ಯದಲ್ಲೂ ಕಚೇರಿಗಳಿಗೆ ಅಲೆಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿರುವುದು ವ್ಯವಸ್ಥೆಯ ಕಾರ್ಯವೈಖರಿಗೆ ಹಿಡಿದ ಕನ್ನಡಿಯಾಗಿದೆ.

ನ.7ಕ್ಕೆ ಹೋಬಳಿ ಮಟ್ಟದ ಬೃಹತ್ ಪ್ರಜಾ ಸೇವಾ ಆಂದೋಲನ ಸಭೆ

ಪಾಂಡವ ನ್ಯೂಸ್, ಹುಬ್ಬಳ್ಳಿ: ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ ಸ್ಥಳದಲ್ಲಿಯೇ ತಕ್ಷಣ ಪರಿಹಾರ ಒದಗಿಸಲು ಜಿಲ್ಲಾಡಳಿತ ಹಾಗೂ ತಾಲೂಕು ಆಡಳಿತದ ವತಿಯಿಂದ ಹೋಬಳಿ ಮಟ್ಟದ ಬೃಹತ್ ಪ್ರಜಾ ಸೇವಾ ಆಂದೋಲನ ಸಭೆಯನ್ನು ಶಾಸಕರ ಅಧ್ಯಕ್ಷತೆಯಲ್ಲಿ ನವೆಂಬರ್ 7 ರಂದು ಬೆಳಿಗ್ಗೆ 10.30 ಕ್ಕೆ ತಾಲೂಕು ಆಡಳಿತ ಸೌಧದ ತಹಶೀಲ್ದಾರ ಕಾರ್ಯಾಲಯದ ಸಭಾಭವನದಲ್ಲಿ ಆಯೋಜಿಸಲಾಗಿದೆ ಎಂದು ಹುಬ್ಬಳ್ಳಿ ಶಹರ ತಹಶೀಲ್ದಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗ್ರಾಮಸ್ಥರ ಒಗ್ಗಟ್ಟಿಗೆ ಸಾಕ್ಷಿಯಾದ ಮಿನಿ ಬಸ್ ನಿಲ್ದಾಣ!

ದೇವರಗುಡ್ಡದ ಅಂಬಾಡೆಮ್ಮನ ಕಟ್ಟೆ ಬಳಿ ನಿಲ್ದಾಣ ಲೋಕಾರ್ಪಣೆ

ಪಾಂಡವ ನ್ಯೂಸ್, ರಾಣೆಬೆನ್ನೂರು: ಗ್ರಾಮೀಣ ಭಾಗದಲ್ಲಿ ಮೂಲಸೌಕರ್ಯ ಕಲ್ಪಿಸಲು ಸರ್ಕಾರದ ನೆರವನ್ನೇ ಕಾಯದೆ, ಗ್ರಾಮಸ್ಥರು ಹಾಗೂ ಯುವಕರು ಒಗ್ಗಟ್ಟಿನಿಂದ ಕೈಜೋಡಿಸಿ ಅಭಿವೃದ್ಧಿ ಕಾರ್ಯ ಕೈಗೊಂಡಿದ್ದಾರೆ. ತಾಲೂಕಿನ ಐತಿಹಾಸಿಕ ಧಾರ್ಮಿಕ ಕ್ಷೇತ್ರ ದೇವರಗುಡ್ಡ ಗ್ರಾಮದ ಗುತ್ತಲ ರಸ್ತೆಯ ಅಂಬಾಡೆಮ್ಮನ ಕಟ್ಟೆ ಬಳಿ ನಿರ್ಮಿಸಿರುವ ನೂತನ ಮಿನಿ ಬಸ್ ನಿಲ್ದಾಣವನ್ನು 71ನೇ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ಸಾರ್ವಜನಿಕರ ಸೇವೆಗೆ ಸಮರ್ಪಿಸಲಾಯಿತು.

ಗ್ರಾಮದ ನಾಗರಿಕರು ಹಾಗೂ ಸ್ವಾಭಿಮಾನಿ ಕರ್ನಾಟಕ ರಕ್ಷಣಾ ವೇದಿಕೆಯ ಕಾರ್ಯಕರ್ತರ ಸಹಕಾರದಲ್ಲಿ ನಿರ್ಮಿಸಿರುವ ನಿಲ್ದಾಣವನ್ನು ವೇದಿಕೆಯ ರಾಜ್ಯಾಧ್ಯಕ್ಷ ನಿತ್ಯಾನಂದ ಕುಂದಾಪುರ ಅವರು ಟೇಪ್ ಕತ್ತರಿಸುವ ಮೂಲಕ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಗ್ರಾಮೀಣ ಭಾಗದಲ್ಲಿ ಸಾರಿಗೆ ಸೌಲಭ್ಯ ಕಲ್ಪಿಸುವುದು ಅತ್ಯಗತ್ಯ. ಸಾರ್ವಜನಿಕರ ಅನುಕೂಲಕ್ಕಾಗಿ ಗ್ರಾಮದ ಯುವಕರು ಒಗ್ಗಟ್ಟಿನಿಂದ



ಮಿನಿ ಬಸ್ ನಿಲ್ದಾಣ ನಿರ್ಮಿಸಿರುವುದು ಮಾದರಿ ಕಾರ್ಯವಾಗಿದೆ. ಇದರಿಂದ ಗ್ರಾಮಸ್ಥರ ಜತೆಗೆ ಶ್ರೀ ಮಾಲತೇಶ ಮಾರ್ತಾಂಡ ಭೈರವನ ದರ್ಶನಕ್ಕೆ ಆಗಮಿಸುವ ಭಕ್ತಾದಿಗಳಿಗೂ ಅನುಕೂಲವಾಗಲಿದೆ ಎಂದರು.

ಜನರು ಮನಸ್ಸು ಮಾಡಿದರೆ ಗ್ರಾಮದ ಅಭಿವೃದ್ಧಿಗೆ ಸರ್ಕಾರದ ನೆರವಿನ ನಿರೀಕ್ಷೆಯಲ್ಲೇ ಇರಬೇಕಿಲ್ಲ. ಸಂಘಟಿತ ಪ್ರಯತ್ನದಿಂದ ಜನೋಪಯೋಗಿ ಕಾರ್ಯಗಳನ್ನು ಸಾಕಾರಗೊಳಿಸಬಹುದು ಎಂಬುದಕ್ಕೆ ದೇವರಗುಡ್ಡದ ಯುವಕರ ಕಾರ್ಯವೇ ಸಾಕ್ಷಿ. ರಾಜ್ಯೋತ್ಸವದ ಸಂದರ್ಭದಲ್ಲಿ ಇಂತಹ ಸೇವಾ ಕಾರ್ಯಕ್ಕೆ ಚಾಲನೆ ದೊರೆತಿರುವುದು ಸಂತಸದ ಸಂಗತಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕರವೇ ಕಾರ್ಯಕರ್ತರಾದ ಆನಂದ ಲಮಾಣಿ, ಗುಡಪ್ಪ ಕೆಂಗಲ್ (ಸೈನಿಕ), ನಿಂಗಪ್ಪ ಬೀರಪ್ಪನವರ್, ಕುಮಾರ್ ಜಜ್ಜೂರಿ, ಹನುಮಂತ, ಕೃಷ್ಣ ವೇಷಗಾರ, ಶಂಕರ್ ಹಳ್ಳಪ್ಪನವರ, ಪರಶುರಾಮ ಕುರುವತ್ತಿ, ಮರಡೆಪ್ಪ ಚಳಗೇರಿ, ರಾಘವೇಂದ್ರ ಕೋಳಿವಾಡ, ದಿಳ್ಳೆಪ್ಪ ನಾಯರ್, ಮಾಲತೇಶ್ ಚಲವಾದಿ, ನೀಲಪ್ಪ ನಾಯರ್, ಭೀಮಪ್ಪ ನಾಯರ್, ರಾಹುಲ್ ಮುದ್ದಿ, ರಮೇಶ್, ಆಕಾಶ ಡೊಳ್ಳಿನ, ಮೃತ್ಯುಂಜಯ, ಅಜಯ್ ತಳಗೇರಿ, ಆನಂದ ಮುದ್ದಿ, ಶಿವಾನಂದ ಮುದ್ದಿ, ಆಕಾಶ ಸತಗಿ, ಕರಿಯಪ್ಪ ಚೂರಿ, ರಣದಪ್ಪ ನಾಯರ್, ಗಣೇಶ ಏಳುಕುರಿ, ಸಂದೀಪ್ ಗುಡಗೂರ ಸೇರಿದಂತೆ ಗ್ರಾಮದ ಮುಖಂಡರು ಹಾಗೂ ಯುವಕರು ಪಾಲ್ಗೊಂಡಿದ್ದರು.

ಪ್ರಮುಖ ಸಂಕ್ಷಿಪ್ತ ಸುದ್ದಿ

ಸೇತುವೆಗೆ ಡಿಕ್ಕಿ ಹೊಡೆದ ಕಾರು: ನಾಲ್ವರಿಗೆ ಗಾಯ

ಪಾಂಡವ ನ್ಯೂಸ್, ರಾಣೇಬೆನ್ನೂರ : ಚಾಲಕನ ನಿಯಂತ್ರಣ ತಪ್ಪಿದ ಕಾರು ಸೇತುವೆಗ